# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 11 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 22–07–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 11 | Title- Code: KARKAN 28269 | Chitradurga | Date: 22-07-2024 Monday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

2027ರೊಳಗೆ ನೇರ ರೈಲ್ವೆ ಮಾರ್ಗ ಪೂರ್ಣ: ಸಚಿವ ಸೋಮಣ್ಣ ಹೇಳಿಕೆ **2**

ತಂಬಾಕು ಮಾರಾಟಕ್ಕೆ ಉದ್ಯಮ ಪರವಾನಗಿ ಕಡ್ಡಾಯ: ಡಾ.ಚಂದ್ರಶೇಖರ್ ಕಂಬಾಳಿಮಠ **3**

ಭಕ್ತಿಯಿಂದ ಮಾತ್ರ ಗುರುವಿನ ಅನುಗ್ರಹಗಳಿಸಲು ಸಾಧ್ಯ: ಸಂಸದ **4**



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

### ಶಿವಶರಣ ಹಡಪದ ಅಪ್ಪಣ್ಣ ಜಯಂತಿಯಲ್ಲಿ ಉಪ ವಿಭಾಗಾಧಿಕಾರಿ ಎಂ.ಕಾರ್ತಿಕ್


# ಮನ ಶುದ್ಧಿಯಿಂದ ಸಮ ಸಮಾಜ ನಿರ್ಮಾಣ

» **ಚಿತ್ರದುರ್ಗ**

ಪ್ರತಿಯೊಬ್ಬರು ತನು, ಮನ, ಭಾವ ಶುದ್ಧಿಯಾಗಿಟ್ಟುಕೊಂಡು ತಮ್ಮ ಕೆಲಸ ಕಾರ್ಯಗಳಲ್ಲಿ ಸರಿಯಾದ ರೀತಿಯಲ್ಲಿ ತೊಡಗಿಕೊಂಡಾಗ ಮಾತ್ರ ಉತ್ತಮ ಸಮಾಜ ನಿರ್ಮಾಣ ಮಾಡಲು ಸಾಧ್ಯವಿದೆ ಎಂದು ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಆಯೋಜಿಸಲಾದ ಶಿವಶರಣ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮದಲ್ಲಿ ಹಡಪದ ಅಪ್ಪಣ್ಣನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು. ಹಡಪದ ಅಪ್ಪಣ್ಣನವರ ಮಾರ್ಗದರ್ಶನದಲ್ಲಿ ನಡೆದುಕೊಂಡು ಹೋದರೆ ಸಮ ಸಮಾಜ ನಿರ್ಮಿಸಬಹುದು. ಅವರು ತಮ್ಮ ಸುತ್ತ ಮುತ್ತಲಿನ ವಾತಾವರಣ, ಸಮಾಜ, ಜೀವನವನ್ನು ಅರ್ಥೈಸಿಕೊಂಡು ಅತ್ಯಂತ ಸರಳವಾಗಿ, ಅರ್ಥಗರ್ಭಿತವಾಗಿ ವಚನಗಳನ್ನು ಕಟ್ಟಿಕೊಟ್ಟಿದ್ದಾರೆ.

ಬಸವಾದಿ ಶರಣರ ವಚನಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡರೆ ಉತ್ತಮ ಸಮಾಜ ಕಟ್ಟಬಹುದು. ಈ ನಿಟ್ಟಿನಲ್ಲಿ ಇಂತಹ ಹಲವು ಕಾರ್ಯಗಳಲ್ಲಿ ತೊಡಗಿಕೊಂಡು ನಾವೆಲ್ಲರೂ ಸೇರಿ



ಸಮ ಸಮಾಜ ನಿರ್ಮಾಣ ಮಾಡೋಣ ಎಂದರು.

ಸಾಹಿತಿ ಎಂ.ಬಿ.ನಾಗರಾಜ್ ಕಾಕನೂರು ಅವರು ಶಿವಶರಣ ಹಡಪದ ಅಪ್ಪಣ್ಣನವರ ಕುರಿತು ಉಪನ್ಯಾಸ ನೀಡಿ, 12ನೇ ಶತಮಾನದ ಶಿವಶರಣರು ಅಸಮಾನತೆಯ ಕಂದರ ಮುಚ್ಚಿ ಸರ್ವರಿಗೆ ಸಮಾನತೆಯ ಬೆಳಕನ್ನು ಕೊಟ್ಟರು. ಕೆಲವರು ಸ್ವತ್ತಾಗಿದ್ದ ಜ್ಞಾನವನ್ನು ಸರ್ವರ ಸ್ವತ್ತಾಗಿ ಮಾಡಿದರು. ಕಾಯಕ ಸಿದ್ಧಾಂತದ ಮೂಲಕ ಹೊಸ ಆರ್ಥಿಕ ನೀತಿಯನ್ನು ತರಲಾಯಿತು. ಲಿಂಗ ಜಾತಿಯ ಸೂಚಕವಲ್ಲ. ಅದು ಜ್ಯೋತಿಯ ಸೂಚಕ ಎಂದು ಹೇಳಿದರು.

ಲೌಕಿಕವಾಗಿ ಹಾಗೂ ಪಾರಮಾರ್ಥಿಕವಾಗಿ ಈ ಎರಡರಲ್ಲೂ ವಿಶೇಷ ಸಾಧನೆ ಮಾಡಿದ ಪ್ರತಿಫಲವಾಗಿ ಅಲ್ಲಮ್ಮ ಪ್ರಭು ಅವರು ಹಡಪದ ಅಪ್ಪಣ್ಣ ಅವರನ್ನು ನಿಜಸುಖಿ ಹಡಪದ ಅಪ್ಪಣ್ಣ ಎಂದು ಕರೆದಿದ್ದಾರೆ ಎಂದು ಹೇಳಿದರು.

ಹಡಪದ ಅಪ್ಪಣ್ಣ ಬಹಳ ಸೇವಾನಿಷ್ಟ ಹಾಗೂ ಪ್ರಮಾಣಿಕರಾಗಿದ್ದರು. ಕಲ್ಲಿಗೆ ಸಂಸ್ಕಾರ ಕೊಟ್ಟರೆ ಶಿಲೆ, ಮಣ್ಣಿಗೆ ಸಂಸ್ಕಾರ ಕೊಟ್ಟರೆ ಮಡಕೆ, ಬಿದಿರಿಗೆ ಸಂಸ್ಕಾರ ಕೊಟ್ಟರೆ ಕೊಳಲು, ಸಗಣಿಗೆ ಸಂಸ್ಕಾರ ಕೊಟ್ಟರೆ ಭಸ್ಮ, ಆಹಾರಕ್ಕೆ ಸಂಸ್ಕಾರ ಕೊಟ್ಟರೆ ಪ್ರಸಾದ, ನರನಿಗೆ ಸಂಸ್ಕಾರ ಕೊಟ್ಟರೆ ಹರ, ನೀರಿಗೆ ಸಂಸ್ಕಾರ ಕೊಟ್ಟರೆ ತೀರ್ಥ, ಜೀವಕ್ಕೆ ಸಂಸ್ಕಾರ ಕೊಟ್ಟರೆ ಜಂಗಮ ಸ್ವರೂಪಿಯಾಗುತ್ತಾನೆಂದು ತೋರಿಸಿಕೊಟ್ಟವರು ಬಸವಣ್ಣ ಹಾಗೂ ಹಡಪದ ಅಪ್ಪಣ್ಣ ಎಂದು ಹೇಳಿದರು.

ಒಬ್ಬರ ಮನೆ, ಒಬ್ಬರ ಮನಸ್ಸು ಮುರಿಯದವನೇ ನಿಜವಾದ ಶರಣ. ಅಂತಹ ಶರಣರು ಹಡಪದ ಅಪ್ಪಣ್ಣ. ನೇರವಾದ ಮಾತುಗಳಿಂದ ಪ್ರೀತಿಯಿಂದ ಸರ್ವರನ್ನು ಅಪ್ಪಿಕೊಂಡರು. ದಿಕ್ಕೆಟ್ಟವರ ಬದುಕಿಗೆ ದಿಕ್ಸೂಚಿಯಾದವರು ಹಡಪದ ಅಪ್ಪಣನವರು ಎಂದರು.

ಪ್ರತಿಯೊಬ್ಬರೂ ಹಡಪದ ಅಪ್ಪಣ್ಣನವರ ಕೊಡುಗೆ, ಆಶಯಗಳನ್ನು ಮನಗಂಡು ಮುನ್ನಡೆಯಬೇಕಿದೆ. ತಮ್ಮ ಮಕ್ಕಳಿಗೆ ವೃತ್ತಿ ಬದುಕಿನ ಜತೆಗೆ ಉತ್ತಮ ಸಂಸ್ಕಾರ, ವಿದ್ಯಾಭ್ಯಾಸ ನೀಡಿ ಸಾತ್ವಿಕ ಸಮಾಜ ನಿರ್ಮಾಣ ಮಾಡುವ ಮೂಲಕ ಸಮಾಜಕ್ಕೆ ಉತ್ತಮ ಕೊಡುಗೆ ನೀಡಬೇಕಿದೆ ಎಂದರು.

ಚಿತ್ರದುರ್ಗದ ಉಮೇಶ್ ಪತ್ತಾರ ಮತ್ತು ತಂಡದವರು ಗೀತ ಗಾಯನ ಪ್ರಸ್ತುತ ಪಡಿಸಿದರು. ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್ ಸ್ವಾಗತಿಸಿದರು. ರಂಗನಿರ್ದೇಶಕ ಕೆ.ಪಿ.ಎಂ.ಗಣೇಶಯ್ಯ ಕಾರ್ಯಕ್ರಮ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘದ ಅಧ್ಯಕ್ಷ ಬಿ.ಕೆ.ಜಯಪ್ಪ, ಕಾರ್ಯದರ್ಶಿ ಎಲ್.ಆರ್.ವೀರಭದ್ರಪ್ಪ ಲೋಕದೊಳಲು, ತಾಲ್ಲೂಕು ಅಧ್ಯಕ್ಷ ವೃಷಬೇಂದ್ರಪ್ಪ, ಜಿಲ್ಲಾ ಸಂಚಾಲಕ ಟಿ.ಸಿ.ಶಿವಪ್ರಕಾಶ್ ಸಾಹಿತಿಗಳಾದ ಜಗನ್ನಾಥ್, ವೇದಮೂರ್ತಿ ಹಾಗೂ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಚಿದಾನಂದಪ್ಪ, ಹಡಪದ ಅಪ್ಪಣ್ಣ ಸೇವಾ ಸಂಘದ ಮುಖಂಡರು ಹಾಗೂ ಗಣ್ಯರು ಇದ್ದರು.

## ಫಾಸ್ಟ್ ನ್ಯೂಸ್

### ವಿಶ್ವ ಮೆದುಳು ದಿನ ಇಂದು

» **ಚಿತ್ರದುರ್ಗ**

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಚೇರಿ, ಜಿಲ್ಲಾ ಆಸ್ಪತ್ರೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ, ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ ಹಾಗೂ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ವತಿಯಿಂದ ಇದೇ ಜುಲೈ 22ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಆಸ್ಪತ್ರೆಯ ಬಿ.ಸಿ.ರಾಯ್ ಸಭಾಂಗಣದಲ್ಲಿ "ವಿಶ್ವ ಮೆದುಳು ದಿನ" ಕಾರ್ಯಕ್ರಮ ಆಯೋಜಿಸಲಾಗಿದೆ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾಸ್ಪತ್ರೆಯ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಚಿತ್ರದುರ್ಗ ವೈದ್ಯಕೀಯ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ವಿಶೇಷಾಧಿಕಾರಿ ಬಿ.ವೈ.ಯುವರಾಜ್, ಜಿಲ್ಲಾ ಆಸ್ಪತ್ರೆ ನಿವಾಸಿ ವೈದ್ಯಾಧಿಕಾರಿ ಡಾ.ಆನಂದ ಪ್ರಕಾಶ್, ಜಿಲ್ಲಾ ಮಾನಸಿಕ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಜಿ.ಓ.ನಾಗರಾಜ್, ತಾಲ್ಲೂಕು ವೈದ್ಯಾಧಿಕಾರಿ ಡಾ.ಬಿ.ವಿ.ಗಿರೀಶ್, ಜಿಲ್ಲಾಸ್ಪತ್ರೆಯ ನೆಫ್ರೋಲಾಜಿಸ್ಟ್ ಡಾ.ಡಿ.ಪ್ರಕಾಶ್, ಫಿಜಿಶಿಯನ್ ಡಾ.ಜಿ.ಆರ್.ಲೀಲಾರಾಘವನ್ ಭಾಗವಹಿಸುವರು. ಬಸವೇಶ್ವರ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ನರರೋಗ ತಜ್ಞ ಡಾ. ಆರ್.ಕಿರಣ್ ಗೌಡ ಅವರು ಉಪನ್ಯಾಸ ನೀಡುವರು. ಕ್ಲಿನಿಕಲ್ ಸೈಕಾಲಾಜಿಸ್ಟ್ ಟಿ.ಶ್ರೀಧರ ಸ್ವಾಗತಿಸುವರು. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಸ್ವಾಗತಿಸುವರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ವಂದಿಸುವರು ಎಂದು ಪ್ರಕಟಣೆ ತಿಳಿಸಿದೆ.

### ಶಿಬಿರಾರ್ಥಿಗಳಿಂದ ಉಜ್ವಲ ಭವಿಷ್ಯಕ್ಕಾಗಿ ಮಕ್ಕಳನ್ನು ಶಾಲೆಗೆ ದಾಖಲಿಸಿ: ಸಂಸದೆ

» **ದಾವಣಗೆರೆ**

ದೇಶದ ಅಭಿವೃದ್ಧಿಗೆ ಶಿಕ್ಷಣವೇ ತಳಹದಿ, ಎಲ್ಲಾ ಮಕ್ಕಳು ಶಿಕ್ಷಣ ಪಡೆಯಬೇಕೆಂಬುದು ಸರ್ಕಾರ ಹಾಗೂ ಇಲಾಖೆ ಗುರಿಯಾಗಿದ್ದು ಈ ನಿಟ್ಟಿನಲ್ಲಿ ಜುಲೈ 31 ರವರೆಗೆ ವಿಶೇಷ ದಾಖಲಾತಿ ಆಂದೋಲನವನ್ನು ಹಮ್ಮಿಕೊಳ್ಳಲಾಗಿದ್ದು ಪೋಷಕರು ತಮ್ಮ ಮಕ್ಕಳನ್ನು ಶಾಲೆಗೆ ಪ್ರವೇಶ ಕಲ್ಪಿಸಬೇಕೆಂದು ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ಕರೆ ನೀಡಿದ್ದಾರೆ. ಶಿಕ್ಷಣ ವಂಚಿತ ಮಕ್ಕಳು ಮತ್ತು ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ತರುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಶಿಕ್ಷಣ ಮಕ್ಕಳ ಮೂಲಭೂತ ಹಕ್ಕು ಎಂಬುದನ್ನು ಸಾಕ್ಷೀಕರಿಸಲು ಸರ್ಕಾರ, ಇಲಾಖೆಯ ಅಧಿಕಾರಿಗಳು, ಶಿಕ್ಷಕರು. ಸಂಘ–ಸಂಸ್ಥೆಗಳು ಸಮಾಜದಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳು, ಆಂದೋಲನಗಳ ಮೂಲಕ ಪೋಷಕರು ಮತ್ತು ಸಮುದಾಯಕ್ಕೆ ಜಾಗೃತಿಯ ಅರಿವನ್ನು ಮೂಡಿಸಬೇಕು. ಶಿಕ್ಷಣ ವಂಚಿತ ಮತ್ತು ಶಾಲೆ ಬಿಟ್ಟ ಮಕ್ಕಳನ್ನು ಶಾಲೆಗೆ ಕರೆತರಲು ಮತ್ತು ಆ ಮಕ್ಕಳಿಗೆ ಉಚಿತ ಹಾಗೂ ಕಡ್ಡಾಯ ಶಿಕ್ಷಣದ ವ್ಯಾಪ್ತಿಗೆ ಒಳಪಡಿಸುವುದು ನಮ್ಮ ಆದ್ಯತೆಯಾಗಿರುವುದರಿಂದ. ಈ ಆಂದೋಲನದ ಅಡಿಯಲ್ಲಿ ಶಾಲಾ ಶಿಕ್ಷಕರು, ಶಿಕ್ಷಣಾಸಕ್ತರು, ಜನಪ್ರತಿನಿಧಿಗಳು, ಮುಖಂಡರು, ಶಾಲಾಭಿವೃದ್ಧಿ ಸಮಿತಿಸದಸ್ಯರುಶಾಲಾಮಕ್ಕಳೊಂದಿಗೆಗ್ರಾಮಗಳಲ್ಲಿ ಮತ್ತು ವಾರ್ಡ್ ಗಳಲ್ಲಿ ಬ್ಯಾನರ್‌ಗಳೊಂದಿಗೆ ಜಾಥಾ ನಡೆಸಿ, ಘೋಷಣೆಗಳ ಮುಖಾಂತರ ಸಮುದಾಯದಲ್ಲಿ ಜಾಗೃತಿಯ ಅರಿವನ್ನು ಮೂಡಿಸಬೇಕಿರುವುದು ಇಂದಿನ ತುರ್ತು ಕಾರ್ಯವಾಗಿದೆ. ಈ ನಿಟ್ಟಿನಲ್ಲಿ ಶಾಲೆಯನ್ನು ಬಿಟ್ಟಿರುವ ಮಕ್ಕಳ ಪೋಷಕರೊಂದಿಗೆ ವಲಸೆ ಬಂದ ಕುಟುಂಬಗಳ ಮುಖ್ಯಸ್ಥರೊಂದಿಗೆ ಮತ್ತು ದಿನಗೂಲಿ ಮಾಡುತ್ತಿರುವ ಮಕ್ಕಳು ಕಂಡುಬಂದಲ್ಲಿ ಅವರ ಮಾಲೀಕರ ಜೊತೆ ಸಮಾಲೋಚಿಸಿ ಮಕ್ಕಳನ್ನು ಹತ್ತಿರದ ಶಾಲೆಗಳಿಗೆ ಸೇರಿಸಲು ಮನವೊಲಿಕೆ ಮಾಡಲು ಸಾರ್ವಜನಿಕರಲ್ಲಿ ಕೋರಿದೆ.

### ಸಹಕಾರ ಸೌಹಾರ್ದ ಕ್ಷೇತ್ರದಲ್ಲಿ ಹೊಯ್ಸಳ ಕ್ರೆಡಿಟ್ ಸಹಕಾರಿ ಬ್ಯಾಂಕ್ ದಾಖಲಾತಿ ವಹಿವಾಟು

# 5.54 ಕೋಟಿ ಲಾಭ: ಸಚಿವ ಡಿ.ಸುಧಾಕರ್

» **ಚಳ್ಳಕೆರೆ**

ಸಹಕಾರಿ ಸೌಹಾರ್ದ ಕ್ಷೇತ್ರದ ಬ್ಯಾಂಕ್‌ಗಳಲ್ಲಿ ನಗರದ ಹೊಯ್ಸಳಕ್ರೆಡಿಟ್ ಸೌಹಾರ್ದ ಸಹಕಾರಿ ಸಂಘ ನಿರೀಕ್ಷೆಗೂ ಮೀರಿ ಉತ್ತಮ ಲಾಭವನ್ನು ಗಳಿಸಿದ್ದಲ್ಲದೆ, ಶೇರುದಾರರಿಗೂ ಸಮೃದ್ಧ ಡಿವೈಡೆಂಡ್ ನೀಡಿ ತನ್ನ ವಹಿವಾಟನ್ನು ಶತಕೋಟಿಯತ್ತ ದಾಟಲು ಸಹಕರಿಸಿದ ಬ್ಯಾಂಕ್‌ನ ಎಲ್ಲಾ ಆಡಳಿತಮಂಡಳಿ ನಿರ್ದೇಶಕರು, ಸಿಬ್ಬಂದಿ ಹಾಗೂ ಶೇರುದಾರರನ್ನು ಅಭಿನಂದಿಸುವುದಾಗಿ ಹೊಯ್ಸಳ ಕ್ರೆಡಿಟ್ ಸೌಹಾರ್ದ ಸಹಕಾರಿ ಸಂಘದ ಅಧ್ಯಕ್ಷ, ಸಚಿವ ಡಿ.ಸುಧಾಕರ ತಿಳಿಸಿದರು. ಬ್ಯಾಂಕ್‌ನ ಆವರಣದಲ್ಲಿ ಪ್ರಸ್ತುತ ವರ್ಷದ ಸರ್ವಸದಸ್ಯರ ಮಹಾಸಭೆಯ ನಂತರ ಪತ್ರಿಕೆಯೊಂದಿಗೆ ಮಾತನಾಡಿ, ಕಳೆದ 2003ರಲ್ಲಿ ಆರಂಭವಾದ ನಮ್ಮ ಬ್ಯಾಂಕ್ ತನ್ನ 21ನೇ ವಾರ್ಷಿಕೋತ್ಸವವನ್ನು ಆಚರಿಸುತ್ತಿದೆ. ಕೇವಲ ಕೆಲವೇ ಲಕ್ಷಗಳಲ್ಲಿ ತನ್ನ ವಹಿವಾಟು ಆರಂಭಿಸಿದ ಬ್ಯಾಂಕ್ ಇಂದು 100



ಕೋಟಿ ವ್ಯವಹಾರವನ್ನು ದಾಖಲಿಸಿದೆ.

ಮುಂದಿನ ವರ್ಷ 150 ಕೋಟಿವ್ಯವಹಾರಮಾಡುವ ಉದ್ದೇಶವನ್ನು ಬ್ಯಾಂಕ್ ಹೊಂದಿದೆ. ಚಿತ್ರದುರ್ಗ ಜಿಲ್ಲೆ ಂುುಷ್ಟೇಂುುಲ್ಲ, ರಾಜ್ಯದ ಸೌಹಾರ್ದ ಸಹಕಾರಿ ಸಂಘದ ವ್ಯವಹಾರಗಳನ್ನು ಅವಲೋಕಿಸಿದಾಗ ಹೊಯ್ಸಳ ಕ್ರೆಡಿಟ್ ಸೌಹಾರ್ದಬ್ಯಾಂಕ್‌ನ ವಹಿವಾಟು ಗುಣಾತ್ಮಕವಾಗಿದೆ ಎಂದರು. ಬ್ಯಾಂಕ್‌ನ ಜನರಲ್ ಮ್ಯಾನೇಜರ್ ಎಸ್.ಕೆ.ಮರಳಿ ಮಾಹಿತಿ ನೀಡಿ, ಪ್ರಸ್ತುತ 2023–24ನೇ ಅವಧಿಯಲ್ಲಿ ನಮ್ಮ ಬ್ಯಾಂಕ್ 5.54 ಕೋಟಿ ಲಾಭವನ್ನು ಗಳಿಸಿದೆ. ಕಳೆದ ಸಾಲಿನಲ್ಲಿ 4.50 ಕೋಟಿ ಲಾಭವನ್ನು ಗಳಿಸಿತ್ತು. ಅಧ್ಯಕ್ಷರ ಸೂಚನೆಯಂತೆ 2024–25ನೇ ಸಾಲಿನಲ್ಲಿ 150 ಕೋಟಿ ವ್ಯವಹಾರವನ್ನು ನಮ್ಮ ಬ್ಯಾಂಕ್ ಮಾಡಲಿದೆ. ಸಮಾಜದ ಎಲ್ಲಾ ವರ್ಗಗಳಿಗೂ ಸಮಾನರೀತಿಯಲ್ಲಿ ಸೌಲಭ್ಯಗಳನ್ನು ವಿತರಿಸುತ್ತಾ ಬಂದಿದೆ. ಗ್ರಾಹಕರ ಅನುಕೂಲಕ್ಕಾಗಿ ಆರ್‌ಟಿಜಿಎಸ್ ವ್ಯವಸ್ಥೆಯನ್ನು ಜಾರಿಗೆ ತಂದಿದೆ, ಸೇಫ್‌ಡಿಪಾಜಿಟ್ ಲಾಕರ್ ಸೌಲಭ್ಯವಿದೆ, ಕೃಷಿ ವಲಯವೂ ಸೇರಿದಂತೆ ವಿವಿಧ ವ್ಯಾಪಾರಸ್ಥರಿಗೆ ಸಾಲವನ್ನು ನೀಡುವುದಲ್ಲದೆ, ಕರಾರೂಒಕ್ಕಾಗಿ ಸಾಲವಸೂಲಿ ಮಾಡಲಾಗುತ್ತಿದೆ ಎಂದರು. ಉಪಾಧ್ಯಕ್ಷಕೆ.ಅಶ್ವತ್ಥನಾರಾಯಣ, ನಿರ್ದೇಶಕರಾದ ಎಸ್.ವಿ.ಪ್ರಹ್ಲಾದ್, ಎಸ್.ಎಂ.ರವಿ, ಸಿ.ಸಿದ್ದಾರ್ಥ, ಜಿ.ಪದ್ಮಗೋವಿಂದರಾಜು, ಲೆಕ್ಕಪರಿಶೋಧಕ ಕೆ.ಸುಹಾಸ್, ವಾಣಿಜ್ಯೋದ್ಯಮಿ ಎಸ್.ರುದ್ರಮುನಿಯಪ್ಪ, ಗಂಗೋತ್ರಿಬ್ಯಾಂಕ್ ಅಧ್ಯಕ್ಷ ಎನ್.ನಾಗಭೂಷಣ್ ಉಪಸ್ಥಿತರಿದ್ದರು.

### ದೈವ ಹಾಗೂ ಗುರುಪರಂಪರೆಯ ಮೇಲೆ ಅಪಾರವಾದ ಗೌರವ



**ಚಳ್ಳಕೆರೆ:** ಕಳೆದ ಹಲವಾರು ದಶಕಗಳಿಂದ ಈ ಭಾಗದ ಸಮಸ್ತ ಜನರಿಗೆ ದೇವರು, ದೈವ ಹಾಗೂ ಗುರುಪರಂಪರೆಯ ಮೇಲೆ ಅಪಾರವಾದ ಗೌರವವಿದೆ ಎಂದು ಸಂಸದ ಗೋವಿಂದ ಎಂ.ಕಾರಜೋಳ ತಿಳಿಸಿದರು. ಅವರು, ಭಾನುವಾರ ದೊಡ್ಡೇರಿಯ ದತ್ತಾವದೂತ ಕನ್ನೇಶ್ವರ ಆಶ್ರಮದಲ್ಲಿ ಹಮ್ಮಿಕೊಂಡಿದ್ದ ಗುರುಪೂರ್ಣಿಮೆ ಮತ್ತು ಸದ್ಭಕ್ತ ಸಭಾಭವನವನ್ನು ಉದ್ಘಾಟಿಸಿ ಮಾತನಾಡಿದರು. ಮಲ್ಲಪ್ಪಸ್ವಾಮೀಜಿಯವರೂ ಸಹ ಶ್ರೇಷ್ಠ ಧಾರ್ಮಿಕ ಚಿಂತಕರು. ಸದಾಕಾಲ ಬಡವರ ಕಲ್ಯಾಣಕ್ಕಾಗಿ ದೇವರನ್ನು ಪೂಜಿಸುವ ಅವಧೂತರಾಗಿದ್ದಾರೆ.


ಪುಟ ↘ 3


## ಪ್ರಮುಖ ಸುದ್ದಿ

### ಸಾಯಿಬಾಬಾ ಮಂದಿರದಲ್ಲಿ ಗುರುಪೂರ್ಣಿಮೆ ಉತ್ಸವ

# ಭಕ್ತಿಯಿಂದ ಗುರುವನ್ನು ಪೂಜಿಸಿದರೆ ಸಂಕಷ್ಟ ನಿವಾರಣೆ

» **ಚಳ್ಳಕೆರೆ**

ಪ್ರತಿಯೊಬ್ಬ ವ್ಯಕ್ತಿಯೂ ಧಾರ್ಮಿಕ ನೆಲೆಗಟ್ಟಿನ ಮೇಲೆ ತನ್ನ ಬದುಕನ್ನು ರೂಪಿಸಿಕೊಳ್ಳವ ಯತ್ನದಲ್ಲಿ ಸಫಲನಾಗುತ್ತಾನೆ. ಯಾವ ವ್ಯಕ್ತಿ ಭಗವಂತನ ಮೇಲೆ ಅಘಾದವಾದ ಭಕ್ತಿ, ಶ್ರದ್ದೆ ಇಡುತ್ತಾನೋ ಅಂತಹ ವ್ಯಕ್ತಿಯಿಂದ ಮಾತ್ರ ನಾವು ಸತ್ಕಾರ್ಯಗಳನ್ನು ನಿರೀಕ್ಷಿಸಬಹುದು. ಇಲ್ಲಿನ ಸಾಯಿಬಾಬಾ ಮಂದಿರವನ್ನು ನಿರ್ಮಿಸಿದ ವೆಂಕಟಸಾಯಿಸೇವಾಟ್ರಸ್ಟ್‌ನ ಅಧ್ಯಕ್ಷರು ಹಾಗೂ ಎಲ್ಲಾ ಸದಸ್ಯರು ಸಾಯಿಬಾಬಾ ಮಂದಿರ ಸ್ಥಾಪನೆ ಮೂಲಕ ಈ ಭಾಗದ ಸಾಯಿಭಕ್ತರಿಗೆ ಸಾಯಿಬಾಬಾರವರ ಕೃಪೆ ದೊರಕಿಸಿಕೊಡುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ನಡೆಸಿದ್ದಾರೆ. ಸಾಯಿಬಾಬಾ ನಮ್ಮೆಲ್ಲರ ಆರಾಧ್ಯದೈವ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ ತಿಳಿಸಿದರು.

ಅವರು, ಭಾನುವಾರ ಸಾಯಿಬಾಬಾ ಮಂದಿರಕ್ಕೆಗುರುಪೂರ್ಣಿಮೆ ಹಿನ್ನೆಲೆಯಲ್ಲಿ ಭೇಟಿ ನೀಡಿ, ಪೂಜೆ ಸಲ್ಲಿಸಿ ನೆರೆದಿದ್ದ ಭಕ್ತರನ್ನು ಉದ್ದೇಶಿಸಿ ಮಾತನಾಡಿದರು. ಈಗಾಗಲೇ 10 ವರ್ಷಗಳನ್ನು ಪೂರೈಸಿ,





11 ವರ್ಷದ ಗುರಪೂರ್ಣಿಮೆಯನ್ನು ಆಚರಿಸಲಾಗುತ್ತಿದೆ. ಸಾಯಿಬಾಬಾ ಮಂದಿರ ನಿರ್ಮಾಣದ ನಂತರ ಈ ಭಾಗದ ಸಾವಿರಾರು ಜನರು ಶ್ರೀಸ್ವಾಮಿಯ ದರ್ಶನ ಪಡೆದುಸಾಯಿಬಾಬಾ ಕೃಪೆಗೆ ಪಾತ್ರರಾಗಿದ್ದಾರೆ.

ಮುಂದಿನ ದಿನಗಳಲ್ಲೂ ಸಹ ಈ ಮಂದಿರ ಎಲ್ಲರ ಸಮಸ್ಯೆಗಳ ನಿವಾರಣಾ ಕೇಂದ್ರವಾಗಲಿ, ಸಾಯಿಬಾಬಾರ ಕೃಪೆ ಎಲ್ಲರ ಮೇಲಿರಲಿ ಎಂದು ಶುಭಹಾರೈಸುವುದಾಗಿ ತಿಳಿಸಿದರು.

ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಮಾತನಾಡಿ, ಮಂದಿರ, ದೇವಸ್ಥಾನ, ಮಸೀದಿ, ಚರ್ಚ್ ಎಲ್ಲವೂ ಧಾರ್ಮಿಕ ಕೇಂದ್ರಗಳಾಗಿವೆ. ಪ್ರತಿಯೊಬ್ಬ ವ್ಯಕ್ತಿಯೂ ಅವರವರ ಧರ್ಮವನ್ನು ಪ್ರೀತಿಸಿ, ಗೌರವಿಸುವ ಅಧಿಕಾರವನ್ನು ಹೊಂದಿದ್ದಾರೆ. ನಮಗೆ ಇಷ್ಟಬಂದ ಧರ್ಮ, ದೇವರನ್ನು ಆರಾಧಿಸಬಹುದು. ಆದರೆ, ಇಂದು ಮಾತ್ರ ಗುರುಪೂರ್ಣಿಮೆ ಹಿನ್ನೆಲೆಯಲ್ಲಿ ನಮ್ಮ ಗುರುಪರಂಪರೆಯನ್ನು ನೆನಪಿಸುವ ಕಾರ್ಯವಾಗುತ್ತಿದೆ. ಗುರುವಿನ ಬಲದಿಂದಲೇ ನಾವು ಇಂದು ಬದುಕನ್ನು ಎದುರಿಸುತ್ತಿದ್ದೇವೆ. ಭಗವಾನ್‌ಸಾಯಿಬಾಬಾರವರೂ ಸಹ ಸಾವಿರಾರು ಭಕ್ತರ ಸಂಕಷ್ಟಗಳ ನಿವಾರಣೆಗಳ ಶಕ್ತಿಯನ್ನು ಹೊಂದಿದ ಮಹಾನ್‌ಗುರುಗಳು. ಸಾಯಿಕೃಪೆ ಎಲ್ಲರ ಮೇಲಿರಲಿ, ಇಂತಹ ಧಾರ್ಮಿಕಕಾರ್ಯಕ್ರಮಗಳಿಗೆ ಇನ್ನೂ ಹೆಚ್ಚಿನ ಪ್ರೋತ್ಸಾಹ ಸಿಗುವಂತಾಗಲಿ ಎಂದು ಬಾಬಾರವರಲ್ಲಿ ಬೇಡಿರುವುದಾಗಿ ತಿಳಿಸಿದರು.

ಶ್ರೀವೆಂಕಟಸಾಯಿ ಸೇವಾಟ್ರಸ್ಟ್ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿ ಮಾತನಾಡಿ, ಭಗವಾನ್‌ಸಾಯಿಬಾಬಾ ಮಂದಿರ ನಿರ್ಮಾಣ ಕಾರ್ಯವನ್ನು ಶ್ರೀವೆಂಕಟಸಾಯಿಸೇವಾಟ್ರಸ್ಟ್‌ನವರು ಮಾಡಿದ್ದರೂ ಅವರಿಗೆ ಬೆನ್ನೆಲುಬಾಗಿ ಈ ಭಾಗದ ಸಾವಿರಾರು ಸಾಯಿಬಾಬಾ ಭಕ್ತರು, ಸಚಿವ ಡಿ.ಸುಧಾಕರ್, ಶಾಸಕ ಟಿ.ರಘುಮೂರ್ತಿ ಸಹಕಾರವನ್ನು ನಾವು ಮರೆಯಲು ಸಾಧ್ಯವಿಲ್ಲ. ಬಾಬಾರವರು ಈ ಭಾಗದಲ್ಲಿ ನೆಲೆಸಿ ಭಕ್ತರ ಕಷ್ಟಗಳನ್ನು ಈಡೇರಿಸಬೇಕೆಂಬುವುದು ಬಹುವರ್ಷಗಳ ಕನಸಾಗಿತ್ತು. ಆದರೆ, ಇಂದು ಅದು ನನಸಾಗುತ್ತಿದೆ. ಎಲ್ಲಾ ಸಾಯಿಬಾಬಾ ಭಕ್ತರ ಕೋರಿಕೆ ಈಡೇರಿದಂತಾಗಿದೆ. ಮುಂದಿನ ದಿನಗಳಲ್ಲೂ ಸಹ ಈ ಕಾರ್ಯಕ್ರಮ ನಿರಂತರವಾಗಿ ನಡೆಯುತ್ತದೆ ಎಂದರು.

ವೆಂಕಟಸೇವಾಟ್ರಸ್ಟ್ ಉಪಾಧ್ಯಕ್ಷ ಬಿ.ಸಿ.ವೆಂಕಟೇಶ್‌ಮೂರ್ತಿ, ಪ್ರಧಾನ ಕಾರ್ಯದರ್ಶಿ ಎಂ.ಆರ್.ರವಿಕುಮಾರ್, ಕಾರ್ಯದರ್ಶಿ ಬಿ.ಸಿ.ಸತೀಶ್, ಹೂವಿನಜಗದೀಶ್, ಕೆ.ನಾಗೇಶ್, ಬಿ.ವಿ.ಚಿದಾನಂದಮೂರ್ತಿ, ಕೆ.ಎಂ.ಜಗದೀಶ್, ಅರುಣಾಜಗದೀಶ್, ರಾಘವೇಂದ್ರನಾಯಕ, ದೇವರಾಜಸಿಂಧೆ, ನಗರಸಭಾ ಸದಸ್ಯರಾದ ಎಂ.ಜೆ.ರಾಘವೇಂದ್ರ ಮುಂತಾದವರು ಉಪಸ್ಥಿತರಿದ್ದರು.

# 2027ರೊಳಗೆ ನೇರ ರೈಲ್ವೆ ಮಾರ್ಗ ಪೂರ್ಣ

» ಚಿತ್ರದುರ್ಗ

2027 ಡಿಸೆಂಬರ್ ಒಳಗಡೆ ದಾವಣಗೆರೆಯಿಂದ ತುಮಕೂರು ನೇರ ರೈಲ್ವೆ ಮಾರ್ಗವನ್ನು ಪೂರ್ಣಗೊಳಿಸ ಲಾಗುವುದೆಂದು ರೈಲ್ವೆ ಮತ್ತು ಜಲಶಕ್ತಿ ಕೇಂದ್ರ ರಾಜ್ಯ ಸಚಿವರಾದ ವಿ.ಸೋಮಣ್ಣ ಭರವಸೆಯನ್ನು ನೀಡಿದ್ದಾರೆ.

ಚಿತ್ರದುರ್ಗ ನಗರಕ್ಕೆ ಭೇಟಿ ನೀಡಿದ್ದ ಅವರು ವೀರಶೈವ ಸಮಾಜದ ಶ್ರೀ ನೀಲಕಂಠೇಶ್ವರ ದೇವಾಲಯಕ್ಕೆ ಭೇಟಿ ನೀಡಿ ನೀಲಕಂಠೇಶ್ವರ ಸ್ವಾಮಿಗೆ ಪೂಜೆಯನ್ನು ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಾವಣಗೆರೆ–ತುಮಕೂರು ನೇರ ರೈಲ್ವೆ ಮಾರ್ಗಕ್ಕೆ ಸಂಬಂಧಪಟ್ಟಂತೆ ಕೇಂದ್ರ ಸರ್ಕಾರ ಈಗಾಗಲೇ ರೈಲ್ವೆ ಯೋಜನೆಯನ್ನು ಒಂದು ಹಂತಕ್ಕೆ ತರಲಾಗಿದೆ. ಈಗಾಗಲೇ ದಾವಣಗೆರೆಯಲ್ಲಿ ರೈಲ್ವೆ ಮಾರ್ಗಕ್ಕೆ ಅಗತ್ಯವಾಗಿ ಬೇಕಾದ ಭೂಮಿಯನ್ನು ವಶಪಡಿಸಿಕೊಳ್ಳಲಾಗಿದೆ. ತುಮಕೂರಿನಿಂದ ಚಿತ್ರದುರ್ಗದವರೆಗೂ ಮಾಡಿದ್ದೇವೆ. ಶಿರಾದಿಂದ ಸ್ವಲ್ಪ ಭಾಗ ಭೂಮಿಯನ್ನು ವಶಪಡಿಸಿಕೊಳ್ಳಬೇಕಿದೆ ಇದರ ಬಗ್ಗೆ ಜಿಲ್ಲಾಧಿಕಾರಿಗಳಿಗೆ ಡಿವಿಜನಲ್ ಕಮಿಷನರ್‌ಗಳಿಗೆ ಸೂಚನೆಯನ್ನು ನೀಡಲಾಗಿದೆ ಎಂದರು.

ರಾಮದುರ್ಗ ತುಮಕೂರು 290 ಕಿ.ಮೀ. ದಾವಣಗೆರೆಯಿಂದ ತುಮಕೂರು ನೇರ ರೈಲ್ವೆ ಮಾರ್ಗ 175 ಕಿ.ಮೀ. ಇವೆರಡನ್ನು 2026 ಡಿಸೆಂಬರ್ ಒಳಗಾಗಿ ಈ ಎರಡು ರೈಲುಗಳನ್ನು ಪೂರ್ಣ ಮಾಡುವ ಗುರಿ ಇದೆ ಆದರೂ 2027ರವರೆಗೆ ಸಮಯವನ್ನು ಪಡೆದಿದ್ದೇನೆ ಎಂದ ಅವರು, ನನ್ನ ಇಲಾಖೆಗೆ ಸಂಬಂಧಪಟ್ಟಂತೆ ಚಿತ್ರದುರ್ಗದಲ್ಲಿ ಲೆವೆಲ್ ಕ್ರಾಸಿಂಗ್ ಸೇರಿದಂತೆ ಇತರೆ ಇರುವ ಕೆಲಸವನ್ನು ಮಾಡುವಂತೆ ಮನವಿ ಮಾಡಿದ್ದಾರೆ ಅವುಗಳನ್ನು ಸಹಾ ಅತಿ ಶೀಘ್ರವಾಗಿ ಪೂರ್ಣ ಮಾಡಲಾಗುವುದು ಇದರ ಬಗ್ಗೆ ಡಿವಿಜಲ್ ಕಮಿಷನರ್ ಸೇರಿದಂತೆ ಎಲ್ಲಾ ಅಧಿಕಾರಿಗಳೊಂದಿಗೆ ಮಾತನಾಡಿದ್ದೇನೆ ಎಂದರು.



ಚಿತ್ರದುರ್ಗ ಜಿಲ್ಲೆ ಐತಿಹಾಸಿಕವಾಗಿ ಮತ್ತು ಧಾರ್ಮಿಕವಾಗಿ ತನ್ನದೇ ಆದ ಮಹತ್ವ ಪಡೆದುಕೊಂಡಿದ್ದು, ಇಲ್ಲಿ ಅನೇಕ ಕಾರ್ಯಯೋಜನೆಗಳು ನೆನೆಗುದಿಗೆ ಬಿದ್ದಿವೆ. ಅದರಲ್ಲೂ ರೈಲ್ವೆ ಇಲಾಖೆಗೆ ಸಂಬಂಧಿಸಿದ ಚಿತ್ರದುರ್ಗ ರೈಲ್ವೆ ನಿಲ್ದಾಣದ ಹತ್ತಿರ ಪಿ–ಬಿ ರಸ್ತೆಯಲ್ಲಿರುವ ರೈಲ್ವೆ ಗೇಟ್‌ಗೆ ಮೇಲುಸೇತುವೆ ನಿರ್ಮಾಣ ಮಾಡಿಕೊಡುವುದರೊಂದಿಗೆ ಅಲ್ಲಿ ಉಂಟಾಗುವ ವಾಹನ ದಟ್ಟಣೆ ಸಮಸ್ಯೆಗೆ ಪರಿಹಾರ .ಶ್ರೀ ಮುರುಘಾಮಠದ ಮುಂಭಾಗದಿಂದ ಶಿವಮೊಗ್ಗಕ್ಕೆ ಹೋಗುವ ರಸ್ತೆಯಲ್ಲಿರುವ (ರಾಷ್ಟ್ರೀಯ ಹೆದ್ದಾರಿ 13) ರೈಲ್ವೆ ಗೇಟಿನ ಬಳಿ ಪದೇ ಪದೇ ವಾಹನ ದಟ್ಟಣೆ ಉಂಟಾಗಿ ಸ್ಥಳಿಯ ಸಾರ್ವಜನಿಕರಿಗೆ ಮತ್ತು ಪ್ರವಾಸಿಗರಿಗೆ ತುಂಬಾ ತೊಂದರೆ ಉಂಟಾಗುತ್ತಿದೆ. ಈ ಸ್ಥಳದಲ್ಲಿಯೂ ಸಹ ರೈಲ್ವೆ ಮೇಲುಸೇತುವೆ ಅಥವಾಕೆಳಸೇತುವೆಯನ್ನಾದರೂನಿರ್ಮಿಸಿ ಸಂಚಾರಕ್ಕೆ ಉಂಟಾಗುವ ಸಮಸ್ಯೆಯನ್ನು ನಿವಾರಿಸಬೇಕು, ದಾವಣಗೆರೆಯಿಂದ ಚಿತ್ರದುರ್ಗ ಮಾರ್ಗವಾಗಿ ತುಮಕೂರಿಗೆ ನೇರ ರೈಲು ಮಾರ್ಗದ ಕಾರ್ಯಯೋಜನೆ ಈಗಾಗಲೇ ಕೇಂದ್ರ ಸರ್ಕಾರದ ಬಜೆಟ್‌ನಲ್ಲಿ ಘೋಷಣೆಯಾಗಿರುವ ಹಿನ್ನೆಲೆಯಲ್ಲಿ ನೇರ ರೈಲ್ವೆ ಮಾರ್ಗದ ಕಾರ್ಯವನ್ನು ತ್ವರಿತವಾಗಿ ಪ್ರಾರಂಭಿಸಿ ಬಹು ದಿನಗಳ ಈ ಭಾಗದ ಜನರ ಬೇಡಿಕೆಯನ್ನು ಈಡೇರಿಸಬೇಕು ಹಾಗೂ ತುರುವನೂರು ರಸ್ತೆಯಲ್ಲಿರುವ ಅವೈಜ್ಞಾನಿಕದಿಂದ ಕೂಡಿರುವ ರೈಲ್ವೆ ಕೆಳಸೇತುವೆಯಲ್ಲಿ ಅದರಲ್ಲೂ ವಿಶೇಷವಾಗಿ ಮಳೆಗಾಲದಲ್ಲಿ ನೀರು ನಿಂತು ಪಾದಾಚಾರಿಗಳಿಗೆ ಮತ್ತು ವಾಹನಗಳಿಗೆ ಓಡಾಡಲು ತೊಂದರೆಯಾಗುತ್ತಿದ್ದು,ಈಸಮಸ್ಯೆಯನ್ನುನಿವಾರಿಸಿಕೊಡಲುವೀರಶೈವಸಮಾಜದವತಿಯಿಂದಮನವಿಮಾಡಲಾಯಿತು.

ಈ ಸಂದರ್ಭದಲ್ಲಿ ವೀರಶೈವ ಸಮಾಜದ ಅಧ್ಯಕ್ಷರಾದ ಹೆಚ್.ಎನ್.ತಿಪ್ಪೇಸ್ವಾಮಿ, ಕಾರ್ಯದರ್ಶಿ ಪಿ.ವಿರೇಂದ್ರಕುಮಾರ್, ಖಜಾಂಚಿ ಕೆ.ಎಂ.ತಿಪ್ಪೇಸ್ವಾಮಿ, ನಿರ್ದೇಶಕರುಗಳಾದ ಕೆ.ಎನ್.ವಿಶ್ವನಾಥಯ್ಯ, ಜಿ.ಎಂ.ಪ್ರಕಾಶ್, ಎಸ್.ವಿ.ಸಿದ್ದೇಶ್, ಶ್ರೀಮತಿ ಲತಾ ಉಮೇಶ್, ನಿರಂಜನ ದೇವರಮನೆ, ಎಸ್.ವಿ.ಕೊಟ್ರೇಶ್, ಸಿದ್ದಪ್ಪ ಪಿ.ಎಂ.ಪಿಳ್ಳೇಕೇರನಹಳ್ಳಿ, ಗಾಣಿಗ ಸಮಾಜದ ಅಧ್ಯಕ್ಷರಾದ ತಿಪ್ಪೇಸ್ವಾಮಿ, ವಿರೂಪಾಕ್ಷಪ್ಪ, ಅಕ್ಕಮಹಾದೇವಿ ಮಹಿಳಾ ಸಮಾಜದ ಉಪಾಧ್ಯಕ್ಷರಾದ ಶ್ರೀಮತಿ ಮೋಕ್ಷಾ ರುದ್ರಸ್ವಾಮಿ, ವಿದ್ಯಾ ವಿಕಾಸ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ವಿಜಯಕುಮಾರ್, ನಿರ್ದೇಶಕರಾದ ಪೃಥ್ವೀಶ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಚರಂಡಿ ಸ್ವಚ್ಛತೆ



» ಚಿತ್ರದುರ್ಗ

ತಾಲ್ಲೂಕಿನ ಮಾಡನಾಯಕನಹಳ್ಳಿಯಲ್ಲಿ ದಾವಣಗೆರೆ ವಿಶ್ವವಿದ್ಯಾನಿಲಯ, ಜ್ಞಾನಗಂಗೋತ್ರಿ ಸ್ನಾತಕೋತ್ತರ ಕೇಂದ್ರದ ವತಿಯಿಂದ ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ವಾರ್ಷಿಕ ಶಿಬಿರ ಆಯೋಜಿಸಲಾಗಿದ್ದು, ಎನ್‌ಎಸ್‌ಎಸ್ ಶಿಬಿರಾರ್ಥಿಗಳಿಂದ ಬುಧವಾರ ಮಾಡನಾಯಕನಹಳ್ಳಿ ಗ್ರಾಮದ ಚರಂಡಿಗಳನ್ನು ಬ್ಲಿಚಿಂಗ್ ಪೌಡರ್‌ನಿಂದ ಸ್ವಚ್ಛಗೊಳಿಸಲಾಯಿತು. ಸಾಮಾಜಿಕ ಅರಣ್ಯ ವಲಯದ ವಲಯ ಅರಣ್ಯಾಧಿಕಾರಿಗಳ ಸಹಯೋಗದೊಂದಿಗೆ ಮನೆಗೊಂದು ಗಿಡ ನೆಡುವ ಕಾರ್ಯಕ್ರಮ ನಡೆಸಲಾಯಿತು. ಎನ್‌ಎಸ್‌ಎಸ್ ವಾರ್ಷಿಕ ಶಿಬಿರ ಸಮಾರೋಪ ಸಮಾರಂಭ ಗುರುವಾರ ನಡೆಯಿತು. ಈ ಸಂದರ್ಭದಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ಘಟಕ 1 ಮತ್ತು 2 ರ ಕಾರ್ಯಕ್ರಮಾಧಿಕಾರಿಗಳಾದ ಡಾ. ಎಂ.ಸುಂದರಂ ಮತ್ತು ಬಿ.ಟಿ.ನಿವೇದಿತ ಹಾಗೂ ಮಾಡನಾಯಕನಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಟಿ.ಲಿಂಗರಾಜು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ವಿದ್ಯುತ್ ಗೋಪುರ ಮುಟ್ಟದಂತೆ ಸೂಚನೆ

» ಚಿತ್ರದುರ್ಗ

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮವು ಜಿಲ್ಲೆಯ 220/66/11 ಕೆ.ವಿ ಹಿರಿಯೂರು ವಿದ್ಯುತ್ ಸ್ವೀಕರಣಾ ಕೇಂದ್ರದಿಂದ ಹರಿಯಬ್ಬೆ ಟ್ಯಾಪಿಂಗ್ ಪಾಯಿಂಟ್ ವರೆಗೆ ಹಾಲಿ ಇರುವ 18.928 ಕಿ.ಮೀ ಉದ್ದದ 66 ಕೆ.ವಿ ವಿದ್ಯುತ್ ಪ್ರಸರಣ ಮಾರ್ಗದ ತಂತಿಯನ್ನು ಬದಲಾಯಿಸುವುದು ಹಾಗೂ ಹೆಚ್ಚುವರಿ ಗೋಪುರಗಳನ್ನು ಅಳವಡಿಸುವ ಕಾಮಗಾರಿ ಮತ್ತು 66/11 ಕೆ.ವಿ ಹರಿಯಬ್ಬೆ ಉಪ ಕೇಂದ್ರದಿಂದ ಹರಿಯಬ್ಬೆ ಟ್ಯಾಪಿಂಗ್ ಪಾಯಿಂಟ್‌ವರೆಗೆ ಹಾಲಿ ಇರುವ 9.628 ಕಿ.ಮೀ ಉದ್ದದ 66 ಕೆ.ವಿ. ವಿದ್ಯುತ್ ಪ್ರಸರಣ ಮಾರ್ಗದ ತಂತಿಯನ್ನು ಬದಲಾಯಿಸುವುದು, ಹೆಚ್ಚುವರಿ ಗೋಪುರಗಳನ್ನು ಅಳವಡಿಸುವ ಕಾಮಗಾರಿಯು ಮುಕ್ತಾಯಗೊಂಡಿರುತ್ತದೆ. ಈ 66 ವಿದ್ಯುತ್ ಮಾರ್ಗವನ್ನು ಜುಲೈ 20ರಂದು ಅಥವಾ ತದನಂತರ ಚೇತನಗೊಳಿಸುವುದರಿಂದ ಈ 66 ಕೆವಿ ಪ್ರಸರಣ ಮಾರ್ಗದ ವಿದ್ಯುತ್ ಗೋಪುರಗಳನ್ನು ಸಾರ್ವಜನಿಕರುಮುಟ್ಟುವುದಾಗಲಿ,ಹತ್ತುವುದಾಗಲಿ, ಮರದ ರೆಂಬೆ, ಲೋಹದ ತಂತಿಗಳನ್ನು ಹಾಗೂ ಇತರೆ ಯಾವುದೇ ವಸ್ತುಗಳನ್ನು ಮಾರ್ಗದ ಮೇಲೆ ಎಸೆಯುವುದಾಗಲಿ ಮತ್ತು ವಿದ್ಯುತ್ ಗೋಪುರಗಳಿಗೆಜಾನುವಾರುಗಳನ್ನುಕಟ್ಟುವುದಾಗಲಿ ಮಾಡಬಾರದು ಎಂದು ಸಾರ್ವಜನಿಕರಿಗೆ ಸೂಚನೆ ನೀಡಲಾಗಿದೆ. ಈ ಮಾರ್ಗದ ಮೊಗಸಾಲೆಯಲ್ಲಿ ಅಪಾಯದ ಮಟ್ಟದಲ್ಲಿ ಇರುವ ಮರಗಳನ್ನು ಸುರಕ್ಷತೆಯ ದೃಷ್ಟಿಯಿಂದ ತೆಗೆದು ಹಾಕಲು ನಿಗಮದ ನಿಯಮಾನುಸಾರ ಸೂಕ್ತ ಪರಿಹಾರ ಪಡೆದುಕೊಂಡು ಮರಗಳನ್ನು ತೆಗೆಯದೇ ಇರುವ ಭೂ ಮಾಲೀಕರು ಕೂಡಲೇ ಮಾರ್ಗದ ಮೊಗಸಾಲೆಯಲ್ಲಿರುವ ಮರಗಳನ್ನು ಕಡಿದು ಹಾಕಲು ಅನುಮತಿ ನೀಡಬೇಕು. ಒಂದು ವೇಳೆ ಈ ಸೂಚನೆಯನ್ನು ಉಲ್ಲಂಘಿಸಿದಲ್ಲಿ ಮಾರ್ಗದಿಂದ ಸಾರ್ವಜನಿಕರಿಗೆ ಆಗುವ ಹಾನಿ, ತೊಂದರೆ, ಅಪಘಾತಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮವು ಜವಾಬ್ದಾರಿಯಾಗಿರುವುದಿಲ್ಲ. ವಿದ್ಯುತ್ ಹಾದುಹೋಗುವ ಪ್ರದೇಶಗಳು: ಮ್ಯಾಕ್ಲೂರಹಳ್ಳಿ, ಬಬ್ಬೂರು, ಹೇಮದಳ, ಅಂಬಲಗೆರೆ, ಬಿದರಕೆರೆ, ಹರಿಯಬ್ಬೆ, ಶಿಡ್ಲಯ್ಯನಕೋಟೆ, ಕ್ಯಾತನಮಳೆ, ಗೊಲ್ಲರಹಟ್ಟಿ ಗೂಳ್ಯ, ರಂಗೇನಹಳ್ಳಿ ಮತ್ತು ಚಂದ್ರಗಿರಿ ಗೊಲ್ಲಹಳ್ಳಿ ಗ್ರಾಮಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಮಾರ್ಗ ಹಾದು ಹೋಗಲಿದೆ ಎಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ಬೃಹತ್ ಕಾಮಗಾರಿ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 23ಕ್ಕೆ ಉಚಿತ ಹೃದಯ ಅರೋಗ್ಯ ತಪಾಸಣೆ

» ದಾವಣಗೆರೆ

ಎಸ್.ಎಸ್.ನಾರಾಯಣ ಸೂಪರ್ ಸ್ಪಷಾಲಿಟಿ ಸೆಂಟರ್ ದಾವಣಗೆರೆ ಮತ್ತು ಜಯನಗರ ಸಿ ಬ್ಲಾಕ್ ನಾಗರೀಕ ಹಿತರಕ್ಷಣಾ ಸಮಿತಿ, ಲಯನ್ಸ್ ಕ್ಲಬ್ ಇವರ ಸಹಯೋಗದಲ್ಲಿ ಜುಲೈ 23ರಂದು ಬೆಳಿಗ್ಗೆ 10ರಿಂದ ಮಧ್ಯಾಹ್ನ 2ರವರೆಗೆ ಉಚಿತ ಹೃದಯ ಆರೋಗ್ಯ ತಪಾಸಣೆ ಶಿಬಿರ ಆಯೋಜಿಸಲಾಗಿದೆ. ಎಸ್.ಎಸ್.ಹೈಟೆಕ್ ರಸ್ತೆಯಲ್ಲಿನ ಶಕ್ತಿನಗರದ ಭೀಷ್ಮ ವೃತ್ತದಲ್ಲಿನ ಜೀನಿಯಸ್ ಸ್ಕೂಲ್ ಹತ್ತಿರದ ಎಸ್.ಎಂ.ಕಾಂಪ್ಲೆಕ್ಸ್‌ನಲ್ಲಿ ರಕ್ತದೊತ್ತಡ, ಇಸಿಜಿ, ವೈದ್ಯರ ಸಮಾಲೋಚನೆ ನಡೆಸಲಾಗುವುದು. ಕಾರ್ಯಕ್ರಮದ ಉದ್ಘಾಟನೆಯನ್ನು ಪಾಲಿಕೆ ಸದಸ್ಯೆ, ಮಾಜಿ ಮೇಯರ್ ಉಮಾ ಪ್ರಕಾಶ್ ನೆರವೇರಿಸುವರು. ನಾಗರೀಕ ಹಿತರಕ್ಷಣಾ ಸಮಿತಿಯ ಅಧ್ಯಕ್ಷ ಬಿ.ಎನ್.ಬಿಕ್ಕೋಜಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯಅತಿಥಿಗಳಾಗಿ ನಾಗರೀಕ ಹಿತರಕ್ಷಣಾ ಸಮಿತಿಯ ಪಿ.ಅಂಜಿನಪ್ಪ, ಟಿ.ಇ.ರುದ್ರಪ್ಪ, ತಿಪ್ಪೇಸ್ವಾಮಿ ಶೆಟ್ರು, ಡಿ.ರವಿಕುಮಾರ್, ಪಿ.ಎಸ್.ನಾಗರಾಜ್, ಸುರೇಶ್ ಅಡ್ಲಿಗೆರೆ, ನಿಂಗಪ್ಪ ಇಟ್ಟಿಗಿ, ಶಂಕರ್‌ನಾಯ್ಕ ಆಗಮಿಸುವರು ಹೆಚ್ಚಿನ ಮಾಹಿತಿಗೆ 9164855358ಗೆ ಸಂಪರ್ಕಿಸಬಹುದು. ಆದ್ದರಿಂದ ಸುತ್ತಮುತ್ತಲಿನ ಬಡಾವಣೆಗಳ ನಿವಾಸಿಗಳು ಶಿಬಿರದ ಸದುಪಯೋಗ ಪಡೆಯಿರಿ.

## ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಲಾರ್ವಾ ಉತ್ಪತ್ತಿ ತಾಣ ನಾಶ

» ಚಿತ್ರದುರ್ಗ

ಚಿತ್ರದುರ್ಗ ನಗರದ ಜಿಲ್ಲಾಸ್ಪತ್ರೆಯ ಆವರಣದಲ್ಲಿ ಡೆಂಗ್ಯೂ ನಿಯಂತ್ರಣ ಕಾರ್ಯಕ್ರಮದ ಅಂಗವಾಗಿ ಪ್ರತಿ ಶುಕ್ರವಾರ ಈಡಿಸ್ ಲಾರ್ವಾ ಉತ್ಪತ್ತಿ ತಾಣ ನಾಶಪಡಿಸುವ ಚಟುವಟಿಕೆ ನಡೆಯಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ವಿಭಾಗದಿಂದ ಹಮ್ಮಿಕೊಂಡಿದ್ದ ಲಾರ್ವಾ ಉತ್ಪತ್ತಿ ತಾಣ ನಾಶ ಕಾರ್ಯಕ್ಕೆ ಜಿಲ್ಲಾಸ್ಪತ್ರೆಯ ನಿವಾಸಿ ವೈದ್ಯಾಧಿಕಾರಿ ಡಾ.ಆನಂದ ಪ್ರಕಾಶ್ ಚಾಲನೆ ನೀಡಿದರು.



ಈ ವೇಳೆ ಮಾತನಾಡಿದ ಜಿಲ್ಲಾಸ್ಪತ್ರೆಯ ನಿವಾಸಿ ವೈದ್ಯಾಧಿಕಾರಿ ಡಾ.ಆನಂದ ಪ್ರಕಾಶ್, ಎಲ್ಲ ಸರ್ಕಾರಿ ಕಚೇರಿಗಳ ಆವರಣದಲ್ಲಿ ಕೀಟಜನ್ಯ ರೋಗಗಳ ಹರಡದಂತೆ ಲಾರ್ವಾ ಉತ್ಪತ್ತಿ ತಾಣಗಳನ್ನು ನಾಶಪಡಿಸುವಂತೆ ಕರೆ ನೀಡಿದರು.

ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಧಿಕಾರಿ ಡಾ.ಕಾಶಿ ಮಾತನಾಡಿ, ಜಿಲ್ಲಾಧಿಕಾರಿಗಳ ಆದೇಶದಂತೆ ಪ್ರತಿಯೊಂದು ಸರ್ಕಾರಿ ಕಚೇರಿಯಲ್ಲಿ ಶುದ್ಧವಾದ ನೀರಿನಲ್ಲಿ ಬೆಳೆಯುವ ಲಾರ್ವ ಉತ್ಪತ್ತಿ ತಾಣಗಳನ್ನು ನಾಶಪಡಿಸುವ ಕಾರ್ಯ ಪ್ರಾರಂಭಿಸಲಾಗಿದೆ. ಈ ಕಾರ್ಯಕ್ಕೆ ಸಾರ್ವಜನಿಕರು ಸ್ವಯಂ ಸೇವಾ ಸಂಸ್ಥೆಗಳು ಕೈಜೋಡಿಸಿ ಡೆಂಗ್ಯೂ ನಿಯಂತ್ರಣಕ್ಕೆ ಕೈಜೋಡಿಸಬೇಕೆಂದು ಕರೆ ನೀಡಿದರು.

ಪ್ಯಾರಾ ಮೆಡಿಕಲ್ ವಿದ್ಯಾರ್ಥಿಗಳ ತಂಡ ರಚಿಸಿ ಜಿಲ್ಲಾಸ್ಪತ್ರೆ, ಸರ್ವೇಕ್ಷಣ ಘಟಕ, ತರಬೇತಿ ಕೇಂದ್ರ, ರಕ್ತ ನಿಧಿ ಕೇಂದ್ರ, ಸ್ಕ್ಯಾನಿಂಗ್ ಸೆಂಟರ್, ಔಷಧಿ ಉಗ್ರಾಣ, ಮೆಡಿಕಲ್ ಕಾಲೇಜು ಕಾಮಗಾರಿ ಸ್ಥಳದಲ್ಲಿ ತ್ಯಾಜ್ಯ ವಸ್ತುಗಳಲ್ಲಿ ಸಂಗ್ರಹಣೆ ನೀರನ್ನು ಖಾಲಿ ಮಾಡಿ ಲಾರ್ವಾಗಳನ್ನು ನಾಶಪಡಿಸಲಾಯಿತು.

ಕಾರ್ಯಕ್ರಮದಲ್ಲಿ ಕೀಟ ಶಾಸ್ತ್ರಜ್ಞೆ ನಂದಿನಿ ಕಡಿ, ಕೀಟ ಜನ್ಯ ರೋಗಗಳ ವಿಭಾಗದ ಸುರೇಶ್ ಬಾಬು, ಮಲ್ಲಿಕಾರ್ಜುನ್ ಯೋಗೀಶ್ ಶ್ರೀನಿವಾಸ್. ಓ ಶ್ರೀನಿವಾಸ್.ವಿ.ನಾಗರಾಜ ಪಾಂಡು, ರುದ್ರಮುನಿ, ಕಾವ್ಯ, ಶ್ರೀಕಾಂತ್ ಇದ್ದರು.

## ಏಷಿಯನ್ ಕಂಪನಿಯ ನಕಲಿ ಬಣ್ಣಕ್ಕೆ ಅಸಲಿ ಲೇಬಲ್: ದೂರು



» ಚಳ್ಳಕೆರೆ

ನಗರದ ಬೆಂಗಳೂರು ರಸ್ತೆಯಲ್ಲಿರುವ ಎಸ್‌ಎಸ್‌ಎಸ್ ಹಾರ್ಡ್‌ವೇರ್ ಅಂಗಡಿಯಲ್ಲಿ ಏಷಿಯನ್ ಪೆಂಟ್ಸ್ ಕಂಪನಿಯ ಪೆಂಟ್ಸ್‌ಗಳನ್ನು ನಕಲು ಮಾಡಿ ಮಾರಾಟ ಮಾಡುತ್ತಿದ್ದ ಬಗ್ಗೆ ಎಸ್‌ಜಿಎಸ್ ಐಪಿಆರ್ ಕಂಪನಿಯ ತನಿಖಾಧಿಕಾರಿ ಎ.ಎಸ್.ದಿನೇಶ್ ಪೊಲೀಸ್ ಠಾಣೆಗೆ ದೂರು ನೀಡಿರುತ್ತಾರೆ.





ಕಳೆದ ಹಲವಾರು ದಶಕಗಳಿಂದ ಏಷಿಯನ್‌ಪೆಂಟ್ಸ್ ಲಿಮಿಟೆಡ್ ಕಂಪನಿ ಉತ್ತಮ ಗುಣಮಟ್ಟದ ಪೆಂಟ್ಸ್‌ನ್ನು ಒದಗಿಸುತ್ತಿದೆ. ಬೆಂಗಳೂರು ರಸ್ತೆಯಲ್ಲಿರುವ ಎಸ್‌ಎಸ್‌ಎಸ್ ಹಾರ್ಡ್‌ವೇರ್‌ಗೆ ಭೇಟಿ ನೀಡಿದಾಗ ಸುಮಾರು 20 ಲೀಟರ್ ಏಷಿಯನ್ ಪೆಂಟ್ಸ್‌ನ್ನು 2650ಕ್ಕೆ ಖರೀದಿಸಿದ್ದು, ಸದರಿ ಪೆಂಟನ್ನು ಲ್ಯಾಬ್‌ನಲ್ಲಿ ಪರೀಕ್ಷಿಸಿದಾಗ ನಕಲಿ ಎಂದು ತಿಳಿದುಬಂದಿದೆ. ಕೂಡಲೇ ಅಂಗಡಿ ಮಾಲೀಕ ಎ.ಎಸ್.ಸತೀಶ್ ವಿರುದ್ಧ ಕಾಫಿರೈಟ್ ಆಕ್ಟ್–1957ರ ಪ್ರಕಾರ ದೂರು ನೀಡಿದ್ದು ಪಿಎಸ್‌ಐ ಜೆ.ಶಿವರಾಜ್ ಪ್ರಕರಣ ದಾಖಲಿಸಿದ್ದಾರೆ. ಸದರಿ ಅಂಗಡಿಗೆ ಪೊಲೀಸ್ ಇಲಾಖೆ ಅಧಿಕಾರಿಗಳೊಂದಿಗೆ ಕಂಪನಿಯವರು ಶನಿವಾರ ಭೇಟಿ ನೀಡಿದ ಸಂದರ್ಭದಲ್ಲಿ ಏಷಿಯನ್ ಪೆಂಟ್ಸ್ ಚಿನ್ಹೆಯುಳ್ಳ ನೂರಾರು ಬಣ್ಣದ ಡಬ್ಬಿಗಳಿದ್ದು ಅವುಗಳೆಲ್ಲವನ್ನು ವಶಪಡಿಸಿಕೊಂಡು ಪೊಲೀಸ್ ಠಾಣೆಗೆ ನೀಡಲಾಗಿದೆ. ಇದರ ಮೌಲ್ಯ ಇನ್ನೂ ಅಂದಾಜಿಸಿಲ್ಲವೆಂದು ಕಂಪನಿಯ ಮೂಲಗಳು ತಿಳಿಸಿವೆ.



ದಾವಣಗೆರೆ ಗೋಣಿವಾಡದ ಶ್ರೀಸೋಮೇಶ್ವರ ವಸತಿಯುತ ವಿದ್ಯಾಲಯ ಹಾಗೂ ಸರ್. ಎಂ.ವಿ. ಎಲೈಟ್ ಒಲಂಪಿಯಾಡ್ ಶಾಲೆಯಲ್ಲಿ ಅರ್ಥಪೂರ್ಣವಾಗಿ ಗುರುಪೂರ್ಣಿಮಾ ಆಚರುಸಲಾಯಿತು. ಪ್ರಾಥಮಿಕ ವಿಭಾಗದ ಮಕ್ಕಳು ಸನಾತನ ಧರ್ಮ ಗುರುಗಳ ವೇಷ ಧರಿಸಿ ಗುರುಗಳ ಮಹತ್ವ ಹಾಗೂ ಶಿಷ್ಯ ಸಮೂಹದ ಸಾಧನೆ ಪ್ರದರ್ಶಿಸಿ ಎಲ್ಲರ ಗಮನ ಸೆಳೆದರು. ಪ್ರೌಢಶಾಲೆಯ ವಿದ್ಯಾರ್ಥಿಗಳು ಆದಿಶಂಕರ ಚಾರ್ಯರ ಕಿರುನಾಟಕದ ಮೂಲಕ ಶಂಕರಾಚಾರ್ಯರ ಮಹತ್ವವನ್ನು ಸಾರಿದರು. ಅಕ್ಷರ ಕಲಿಸಿದ ಗುರುವಿಗೆ ಹೇಗೆ ಗೌರವ ನೀಡಬೇಕೆಂದು ನೃತ್ಯದ ಮೂಲಕ ಎಲ್ಲರ ಗಮನ ಸೆಳೆದರು. ಈ ಕಾರ್ಯಕ್ರಮದಲ್ಲಿ ಪ್ರಾಂಶುಪಾಲರಾದ ವೀಣಾ.ಪಿ.ಎಚ್ ಹಾಗೂ ಶ್ರೀನಿವಾಸ್ ಮತ್ತು ಶಿಕ್ಷಕರಾದ ಸಾವಿತ್ರಮ್ಮ, ಪಲ್ಲವಿ, ಆಡಳಿತ ಸಿಬ್ಬಂದಿ, ಶಿಕ್ಷಕ ವೃಂದ, ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

### ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಕಾಶಿ

# ಸೊಳ್ಳೆಗಳ ತಾಣವಾಗದಂತೆ ಕೆಎಸ್‌ಆರ್‌ಟಿಸಿ ಡಿಪೋದ ಸ್ವಚ್ಛತೆ ಕಾಪಾಡಿ

» ಚಿತ್ರದುರ್ಗ

ಸೊಳ್ಳೆಗಳ ಉತ್ಪತ್ತಿ ತಾಣವಾಗದಂತೆ ಕೆಎಸ್‌ಆರ್‌ಟಿಸಿ ಡಿಪೋದ ಸ್ವಚ್ಛತೆ ಕಾಪಾಡಬೇಕುಎಂದುಜಿಲ್ಲಾರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಕಾಶಿ ಹೇಳಿದರು.

ಜಿಲ್ಲಾ ಆರೋಗ್ಯ ಇಲಾಖೆ, ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ, ಕೀಟಜನ್ಯ ರೋಗಗಳ, ಸಾಂಕ್ರಾಮಿಕ ರೋಗಗಳ ವಿಭಾಗದ ಆರೋಗ್ಯ ನಿರೀಕ್ಷಣಾಧಿಕಾರಿಗಳ ತಂಡ ನಗರದ ಕೆ.ಎಸ್.ಆರ್.ಟಿ.ಸಿ ಡಿಪೋಗೆ ಶನಿವಾರ ಭೇಟಿ ನೀಡಿ, ಸೊಳ್ಳೆಗಳ ಉತ್ಪತ್ತಿ ತಾಣಗಳ ನಾಶ ಮಾಡುವ ಮಾಹಿತಿ ಶಿಕ್ಷಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ರಾಜ್ಯದಾದ್ಯಂತ ಡೆಂಗ್ಯೂ ಜ್ವರ ಪ್ರಕರಣಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಸೊಳ್ಳೆಗಳ ನಿಯಂತ್ರಣ ಮಾಡದಿದ್ದಲ್ಲಿ ನಿಯಂತ್ರಣ ಕಾರ್ಯ ಕ್ಲಿಷ್ಟಕರವಾಗುತ್ತದೆ. ಟೈರ್‌ಗಳನ್ನು ಗೋಪುರದ ರೀತಿ ನಿಲ್ಲಿಸಿ, ನೀರು ನಿಲ್ಲುವ ಎಲ್ಲಾ ಬ್ಯಾರಲ್, ಕಂಟೈನರ್‌ಗಳನ್ನು ಸರಿಯಾದ ಕ್ರಮದಲ್ಲಿ ಜೋಡಿಸಿ,



ಸಾಧ್ಯವಾದಲ್ಲಿ ಕೀಟನಾಶಕ ಸಿಂಪಡಿಸಿ. ವಾರಕ್ಕೆ ಎರಡು ಬಾರಿಯಾದರೂ ಡಿಪೋ ಒಳಾಂಗಣ, ಹೊರಾಂಗಣದಲ್ಲಿ ಸ್ವಚ್ಛತಾ ಕಾರ್ಯ ಮಾಡಿ ಸೊಳ್ಳೆಗಳ ತಾಣವಾಗದಂತೆ ಡಿಪೋದ ಸ್ವಚ್ಛತೆ ಕಾಪಾಡಿ ಎಂದು ಹೇಳಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಮಾತನಾಡಿ, ಸೊಳ್ಳೆಗಳ ನಿಯಂತ್ರಣಕ್ಕೆ ಕಛೇರಿಯ ವಾತಾವರಣದಲ್ಲಿ, ಮನೆಯ ವಾತವರಣದಲ್ಲಿ ಸ್ವಯಂ ರಕ್ಷಣೆ ಪಡೆಯಬೇಕು. ಜ್ವರ ಬಂದ ಕೂಡಲೇ ಸ್ವಯಂ ಚಿಕಿತ್ಸೆ ಮಾಡಿಕೊಳ್ಳದೇ ಸರ್ಕಾರಿ ಆಸ್ಪತ್ರೆಗೆ ಬಂದು ರಕ್ತ ಪರೀಕ್ಷೆ ಮಾಡಿಸಿ ಚಿಕಿತ್ಸೆ ಪಡೆಯಿರಿ ಎಂದು ತಿಳಿಸಿದ ಅವರು, ಕೆಎಸ್‌ಆರ್‌ಟಿಸಿ ಡಿಪೋದ ಪಕ್ಕದಲ್ಲಿ ವಸತಿ ನಿವಾಸಗಳಲ್ಲಿ ಸಾರ್ವಜನಿಕರು ವಾಸವಿದ್ದು, ಸಾರ್ವಜನಿಕರ ಆರೋಗ್ಯ ಸಮಸ್ಯೆಯಾಗದಿರಲಿ ಎಂದರು.

ಈ ಸಂದರ್ಭದಲ್ಲಿ ಕೆ.ಎಸ್.ಆರ್.ಟಿ.ಸಿ. ಡಿಪೋ ಇಂಜಿನಿಯರ್ ಸುರೇಶ್, ಉಗ್ರಾಣ ಪಾಲಕ ಎನ್.ಮಂಜುನಾಥ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಸುರೇಶ್ ಬಾಬು, ಮಲ್ಲಿಕಾರ್ಜುನ, ನಾಗರಾಜ್, ಮಳಲಿ ಶ್ರೀನಿವಾಸ, ನಾಗರಾಜ, ಗಂಗಾಧರ ರೆಡಿ, ವಾಹನ ಚಾಲಕ ಮಹಂತೇಶ್ ಸೇರಿದಂತೆ ಡಿಪೋದಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಲೋಕಾಯುಕ್ತ ಅಧಿಕಾರಿಗಳಿಂದ ಅಹವಾಲು ಸ್ವೀಕಾರ

» ಚಿತ್ರದುರ್ಗ

ಕರ್ನಾಟಕ ಲೋಕಾಯುಕ್ತ ಚಿತ್ರದುರ್ಗ ವಿಭಾಗದ ಅಧಿಕಾರಿಗಳು ಇದೇ ಜುಲೈ 24 ಮತ್ತು 25 ರಂದು ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ತಾಲ್ಲೂಕುಗಳಿಗೆ ಖುದ್ದಾಗಿ ಭೇಟಿ ನೀಡಿ ಸಾರ್ವಜನಿಕರಿಂದ ದೂರು ಹಾಗೂ ಅವಹಾಲು ಸ್ವೀಕರಿಸುವರು. ಇದೇ ಜುಲೈ 24ರಂದು ಬುಧವಾರ ಬೆಳಿಗ್ಗೆ 10 ರಿಂದ 1 ಗಂಟೆಯವರೆಗೆ ಚಳ್ಳಕೆರೆ, ಮೊಳಕಾಲ್ಮೂರು ತಾಲ್ಲೂಕು ಕಚೇರಿಗಳಲ್ಲಿ ಹಾಗೂ ಮಧ್ಯಾಹ್ನ 2.30 ರಿಂದ ಸಂಜೆ 5ರವರೆಗೆ ಚಿತ್ರದುರ್ಗ ಮತ್ತು ಹಿರಿಯೂರು ತಾಲ್ಲೂಕು ಕಚೇರಿಗಳಲ್ಲಿ ಅಹವಾಲು ಸ್ವೀಕರಿಸಲಿದ್ದಾರೆ. ಜುಲೈ.25ರಂದು ಗುರುವಾರ ಬೆಳಿಗ್ಗೆ 10.30 ರಿಂದ 1.30 ರವರೆಗೆ ಹೊಸದುರ್ಗ ತಾಲ್ಲೂಕು ಕಚೇರಿಯಲ್ಲಿ ಹಾಗೂ ಮಧ್ಯಾಹ್ನ 2.30 ರಿಂದ ಸಂಜೆ 5.30ರವರೆಗೆ ಹೊಳಲ್ಕೆರೆ ತಾಲ್ಲೂಕು ಕಚೇರಿಯಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದಾರೆ. ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸ ಮಾಡಿಕೊಡಲು ಅಲ್ಲಿನ ಅಧಿಕಾರಿ, ಸಿಬ್ಬಂದಿ ಲಂಚಕ್ಕಾಗಿ ಬೇಡಿಕೆ, ಯೋಜನೆಗಳ ಅನುಷ್ಠಾನದಲ್ಲಿ ಅನಾವಶ್ಯಕ ವಿಳಂಬ, ಕರ್ತವ್ಯದಲ್ಲಿ ನಿರ್ಲಕ್ಷತನ, ತಾರತಮ್ಯ, ಅರ್ಹ ಫಲಾನುಭವಿಗಳಿಗೆ ಸರ್ಕಾರದ ಯೋಜನೆಗಳ ಲಾಭ ಸರಿಯಾದ ರೀತಿಯಲ್ಲಿ ತಲುಪಿಸದೇ ಇರುವ ಕುರಿತು ಸಾರ್ವಜನಿಕರು ನಿಗದಿತ ಅರ್ಜಿ ನಮೂನೆಯಲ್ಲಿ ದೂರು ಸಲ್ಲಿಸಬಹುದು ಎಂದು ಕರ್ನಾಟಕ ಲೋಕಾಯುಕ್ತ ಚಿತ್ರದುರ್ಗ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಳೆ, ಬೆಳೆ ನಷ್ಟ ವಿವರ

» ದಾವಣಗೆರೆ

ಜಿಲ್ಲೆಯಲ್ಲಿ ಜುಲೈ 19 ರಂದು 17.2 ಮಿ.ಮೀ. ಸರಾಸರಿ ಮಳೆಯಾಗಿದ್ದು, ಅಧಿಕ ಮಳೆಯಿಂದಾಗಿ ಒಟ್ಟಾರೆ ರೂ.12.30 ಲಕ್ಷ ಅಂದಾಜು ನಷ್ಟ ಸಂಭವಿಸಿರುತ್ತದೆ. ಚನ್ನಗಿರಿ ತಾಲ್ಲೂಕಿನಲ್ಲಿ 4.8 ಮಿ.ಮೀ ವಾಡಿಕೆಗೆ 18.9 ಮಿ.ಮೀ ವಾಸ್ತವ, ದಾವಣಗೆರೆ ತಾಲ್ಲೂಕಿನಲ್ಲಿ 3.3 ಮೀ.ಮಿ ವಾಡಿಕೆಗೆ 18.6 ಮೀ.ಮಿ ವಾಸ್ತವ, ಹರಿಹರ ತಾಲ್ಲೂಕಿನಲ್ಲಿ 1.9 ಮಿ.ಮೀ. ವಾಡಿಕೆಗೆ 20.6 ಮೀ.ಮಿ ವಾಸ್ತವ, ಹೊನ್ನಾಳಿ ತಾಲ್ಲೂಕಿನಲ್ಲಿ 6.2 ಮಿ.ಮೀ ವಾಡಿಕೆಗೆ 23.3 ವಾಸ್ತವ, ಜಗಳೂರು ತಾಲ್ಲೂಕಿನಲ್ಲಿ 2.1 ಮೀ.ಮಿ ವಾಡಿಕೆ, 5.6 ಮೀ.ಮಿ ವಾಸ್ತವ, ನ್ಯಾಮತಿ ತಾಲ್ಲೂಕಿನಲ್ಲಿ 7.2ಮೀ.ಮಿ ವಾಡಿಕೆ, 26.2 ಮೀ.ಮಿ ವಾಸ್ತವ ಸರಾಸರಿ ಮಳೆಯಾಗಿದೆ. ದಾವಣಗೆರೆ ತಾಲ್ಲೂಕು ವ್ಯಾಪ್ತಿಯಲ್ಲಿ 3 ಕಚ್ಚಾ ಮನೆಗಳು ಭಾಗಶ: ಹಾನಿಯಾಗಿದ್ದು ರೂ. 90 ಸಾವಿರ ಅಂದಾಜು ನಷ್ಟ ಸಂಭವಿಸಿರುತ್ತದೆ. ಹರಿಹರ ತಾಲ್ಲೂಕು ವ್ಯಾಪ್ತಿಯಲ್ಲಿ 2 ಪಕ್ಕಾ ಮನೆ ಪೂರ್ಣ ಹಾನಿಯಾಗಿದ್ದು ರೂ.4. ಲಕ್ಷ, 2 ಕಚ್ಚಾ ಮನೆ ಭಾಗಶಃ ಹಾನಿಯಾಗಿದ್ದು, ರೂ.60 ಸಾವಿರ, 1 ದನದ ಕೊಟ್ಟಿಗೆ ಹಾನಿಯಾಗಿದ್ದು, ರೂ.5 ಸಾವಿರ ಒಟ್ಟು ರೂ. 5.25 ಲಕ್ಷಅಂದಾಜು ನಷ್ಟ ಸಂಭವಿಸಿರುತ್ತದೆ. ನ್ಯಾಮತಿ ತಾಲ್ಲೂಕು ವ್ಯಾಪ್ತಿಯಲ್ಲಿ 3 ಪಕ್ಕಾ ಮನೆ ಭಾಗಶಃ ಹಾನಿಯಾಗಿದ್ದು, ರೂ. 75 ಸಾವಿರ ಅಂದಾಜು ನಷ್ಟ ಸಂಭವಿಸಿರುತ್ತದೆ. ಚನ್ನಗಿರಿ ತಾಲ್ಲೂಕು ವ್ಯಾಪ್ತಿಯಲ್ಲಿ 2 ಪಕ್ಕಾ ಮನೆ ಪೂರ್ಣ ಹಾನಿಯಾಗಿದ್ದು, ರೂ. 1.60 ಲಕ್ಷ, 9 ಪಕ್ಕಾ ಮನೆ ಭಾಗಶಃ ಹಾನಿಯಾಗಿದ್ದು, ರೂ.3.80 ಲಕ್ಷ, ಅಂದಾಜು ನಷ್ಟ ಸಂಭವಿಸಿರುತ್ತದೆ. ಸರ್ಕಾರದ ಮಾರ್ಗಸೂಚಿಯನ್ವಯ ಸಂತ್ರಸ್ತರಿಗೆ ಪರಿಹಾರ ವಿತರಿಸಲು ಕ್ರಮ ವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ.

### ರೈತ ಮಹಿಳೆಯರಿಗೆ ಹೈನುಗಾರಿಕೆಗೆ ಪ್ರೋತ್ಸಾಹಿಸಲು ಬಡ್ಡಿ ಸಹಾಯಧನ ಯೋಜನೆ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ರೈತ ಮಹಿಳೆಯರಿಗೆ ಹೈನುಗಾರಿಕೆಯಲ್ಲಿ ಪ್ರೋತ್ಸಾಹಿಸಲು ಹಸು, ಎಮ್ಮೆ ಖರೀದಿಗೆ ಪಡೆಯುವ ಸಾಲದ ಮೇಲಿ ಬಡ್ಡಿಯನ್ನು ಸಕಾಲದಲ್ಲಿ ಮರುಪಾವತಿ ಮಾಡುವ ಮಹಿಳಾ ಫಲಾನುಭವಿಗಳಿಗೆ (ಪ್ರತಿ ಜೂನ್–30, ಸೆಪ್ಟೆಂಬರ್–30, ಡಿಸೆಂಬರ್–30, ಮಾರ್ಚ್ 31) ಸರ್ಕಾರದಿಂದ ಶೇ.9ರ ಪ್ರತಿ ತ್ರೈಮಾಸಿಕಕ್ಕೆ ಬಡ್ಡಿ ಸಹಾಯಧನ ನೀಡುವ ಯೋಜನೆ ಜಾರಿಯಲ್ಲಿದೆ. ದಾವಣಗೆರೆ ಜಿಲ್ಲೆಯ ತಾಲ್ಲೂಕುಗಳಿಗೆ ಮರು ಹಂಚಿಕೆ ಮಾಡಲಾದ ಗುರಿಗಳಂತೆ ಅರ್ಹ ಫಲಾನುಭವಿಗಳು ಹೆಚ್ಚಿನ ಮಾಹಿತಿಯನ್ನು ಆಯಾ ತಾಲ್ಲೂಕು ಮುಖ್ಯ ಪಶುವೈದ್ಯಾಧಿಕಾರಿಗಳು (ಆಡಳಿತ) ಗಳ ಮೂಲಕ ಮತ್ತು ಸ್ಥಳೀಯ ವಶುವೈದ್ಯಾಧಿಕಾರಿಗಳನ್ನು ಸಂಪರ್ಕಿಸಿ ಮಾಹಿತಿ ಪಡೆಯಬೇಕು. ಚನ್ನಗಿರಿ ತಾಲ್ಲೂಕಿನ ಪಶು ಆಸ್ಪತ್ರೆ ಮುಖ್ಯ ಪಶುವೈದ್ಯಾಧಿಕಾರಿ ಮೊ.ಸಂ: 9880961745, ದಾವಣಗೆರೆ ತಾಲ್ಲೂಕು ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿ ಮೊ.ಸಂ: 9353567572, ಹರಿಹರ ತಾಲ್ಲೂಕು ಪಶು ಆಸ್ಪತ್ರೆ ಮುಖ್ಯ ಪಶುವೈದ್ಯಾಧಿಕಾರಿ ಮೊ.ಸಂ: 9900369113, ಹೊನ್ನಾಳಿ ತಾಲ್ಲೂಕು ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿ ಮೊ.ಸಂ: 9480506320, ಜಗಳೂರು ತಾಲ್ಲೂಕು ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿ ಮೊ.ಸಂ: 9901641942, ನ್ಯಾಮತಿ ತಾಲ್ಲೂಕು ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿ ಮೊ.ಸಂ: 9632916405 ಸಂಪರ್ಕಿಸಲು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ

---

#### ಜಿಲ್ಲಾ ತಂಬಾಕು ನಿಯಂತ್ರಣಾಧಿಕಾರಿ ಡಾ.ಚಂದ್ರಶೇಖರ್ ಕಂಬಾಳಿಮಠ

# ತಂಬಾಕು ಮಾರಾಟಕ್ಕೆ ಪರವಾನಗಿ ಕಡ್ಡಾಯ

» ಚಿತ್ರದುರ್ಗ

ತಂಬಾಕು ಉತ್ಪನ್ನ ಮಾರಾಟ ಮಾಡಲು ಉದ್ಯಮ ಪರವಾನಗಿ ಕಡ್ಡಾಯ ಎಂದು ಜಿಲ್ಲಾ ತಂಬಾಕು ನಿಯಂತ್ರಣಾಧಿಕಾರಿ ಡಾ.ಚಂದ್ರಶೇಖರ್ ಕಂಬಾಳಿಮಠ ಹೇಳಿದರು.

ಇಲ್ಲಿನ ನಗರಸಭೆ ಸಭಾಂಗಣದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ನಗರಸಭೆ ಸಂಯುಕ್ತಾಶ್ರಯದಲ್ಲಿ ಹೋಟೆಲ್ ಮಾಲೀಕರಿಗೆ ಹಾಗೂ ತಂಬಾಕು ಉತ್ಪನ್ನ ಮಾರಾಟಗಾರರಿಗೆ ಉದ್ಯಮ ಪರವಾನಗಿ ನೀಡುವ ಕುರಿತು ಮತ್ತು ಕೋಟ್ಪಾ–2003ರ ಕಾಯ್ದೆಯ ಪರಿಣಾಮಕಾರಿ ಅನುಷ್ಠಾನ, ಸಾಮರ್ಥ್ಯಾಭಿವೃದ್ಧಿ, ಮೇಲ್ವಿಚಾರಣೆ ಕುರಿತಂತೆ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ತಂಬಾಕು ಉತ್ಪನ್ನ ಮಾರಾಟ ಮಾಡಲು ಉದ್ಯಮ ಪರವಾನಗಿಯನ್ನು ಕಡ್ಡಾಯವಾಗಿ



ನಗರಸಭೆ ವತಿಯಿಂದ ಪಡೆದುಕೊಂಡು ಮಾರಾಟ ಮಾಡಬೇಕೆಂದು ವ್ಯಾಪಾರಸ್ಥರಿಗೆ ಸೂಚಿಸಿದ ಅವರು, ಕೋಟ್ಪಾ–2003ರ ಕಾಯ್ದೆಯ ಎಲ್ಲಾ ಸೆಕ್ಷನ್‌ಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ತಿಳಿಸಿದರು.ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಗೆಗಾರ ಬಿ.ಎಂ.ಪ್ರಭುದೇವ್ ಮಾತನಾಡಿ, ಕೋಟ್ಪಾ–2003ರ ಕಾಯ್ದೆಯ ಕುರಿತು ವ್ಯಾಪಾರಸ್ಥರಿಗೆ ಜಾಗೃತಿ ಮೂಡಿಸಿದರು. ಕಾನೂನು ಬಾಹಿರ ಉತ್ಪನ್ನಗಳನ್ನು ಮಾರಾಟ ಮಾಡಬಾರದು ಮತ್ತು ತಂಬಾಕು ಉತ್ಪನ್ನಗಳನ್ನು ಜಾಹೀರಾತು ಮಾಡಬಾರದು. ಮಾಡಿದಲ್ಲಿ ಎಫ್.ಐ.ಆರ್ ದಾಖಲಿಸಲಾಗುವುದು ಎಂದು ತಿಳಿಸಿದರು. ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಮಾಜ ಕಾರ್ಯಕರ್ತ ಕೆ.ಎಂ.ತಿಪ್ಪೇಸ್ವಾಮಿ ಅವರು ತಂಬಾಕು ಉತ್ಪನ್ನಗಳ ಸೇವನೆಯಿಂದ ಆಗುವಂತಹ ದುಷ್ಪರಿಣಾಮಗಳ ಕುರಿತು ಮತ್ತು ತಂಬಾಕು ವ್ಯಸನ ಮುಕ್ತ ಕೇಂದ್ರ, ಜಿಲ್ಲಾ ಆಸ್ಪತ್ರೆ, ಸಾರ್ವಜನಿಕ ಆಸ್ಪತ್ರೆ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ದೊರೆಯುವಂತಹ ಉಚಿತ ಆಪ್ತ ಸಮಾಲೋಚನೆ ಮತ್ತು ನಿಕೋಟಿನ್ ಗಮ್ ನೀಡುವ ಬಗ್ಗೆ ಹಾಗೂ ನಗರ ಪ್ರದೇಶಗಳಲ್ಲಿ ಗರ್ಭಿಣಿ ಸ್ತ್ರೀಯರು ಧೂಮಪಾನವನ್ನು ಮಾಡುತ್ತಾರೆ. ಇದರಿಂದಾಗಿ ಮಹಿಳೆಯರಿಗೂ ಮತ್ತು ಮಗುವಿನ ಬೆಳವಣಿಗೆಗೆ ಹಾಗೂ ಆರೋಗ್ಯದ ಮೇಲೆ ಪ್ರಭಾವ ಬೀರುತ್ತದೆ ಎಂದು ಸವಿವರವಾಗಿ ಮಾಹಿತಿ ನೀಡಿದರು.ನಗರಸಭೆ ಆರೋಗ್ಯ ನಿರೀಕ್ಷಣಾಧಿಕಾರಿ ಬಾಬುರೆಡ್ಡಿ ಮಾತನಾಡಿ, ಎಲ್ಲಾ ವ್ಯಾಪಾರಸ್ಥರು ಕೋಟ್ಪಾ–2003ರ ಕಾಯ್ದೆ ಪಾಲಿಸಬೇಕು ಮತ್ತು ಪರವಾನಗಿಯನ್ನು ಪಡೆದುಕೊಂಡು ವ್ಯಾಪಾರ ಮಾಡುವಂತೆ ತಿಳಿಸಿದರು.

ತರಬೇತಿ ಕಾರ್ಯಾಗಾರದಲ್ಲಿ ತಂಬಾಕು ಮಾರಾಟಗಾರರು, ಹೋಟೆಲ್ ಮಾಲೀಕರುಗಳು ಇದ್ದರು.

---

## ಭಗವಾನ್ ಶ್ರೀಸಾಯಿಬಾಬಾ ಕೃಪೆಯಿಂದ ಬದುಕಿಗೆ ಹೊಸ ಶಕ್ತಿ: ಸಂಸದ ಗೋವಿಂದ ಕಾರಜೋಳ

» ಚಳ್ಳಕೆರೆ

ಸಾಯಿಬಾಬಾರವರ ಮೇಲೆ ನಾನಿಟ್ಟ ಅಚಲವಾದ ನಂಬಿಕೆ, ವಿಶ್ವಾಸ, ಗೌರವ ನನಗೆ ಇಂದು ಈ ಕ್ಷೇತ್ರದಲ್ಲಿ ಸಂಸದನಾಗಿ ಕಾರ್ಯನಿರ್ವಹಿಸಲು ಅವಕಾಶ ಮಾಡಿಕೊಟ್ಟಿದ್ದಾರೆಂದು ಸಂಸದ ಗೋವಿಂದ ಕಾರಜೋಳ ತಿಳಿಸಿದರು.

ಸಾಯಿಬಾಬಾ ಮಂದಿರಕ್ಕೆ ಗುರುಪೂರ್ಣಿಮೆ ಹಿನ್ನಲೆಯಲ್ಲಿ ಭೇಟಿ ನೀಡಿ ವೆಂಕಟಸಾಯಿ ಟ್ರಸ್ಟ್ ಹಾಗೂ ಸಾಯಿಬಾಬಾ ಭಕ್ತರು ನೀಡಿದ ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದರು.

ಮಳೆ, ಬೆಳೆ ಇಲ್ಲದ ಬಯಲುನಾಡಿನಲ್ಲಿ ಸಾಯಿಬಾಬಾರವರು ಭದ್ರವಾಗಿ ನೆಲೆಸಿ ಎಲ್ಲಾ ಭಕ್ತರಿಗೆ ಶ್ರೇಯಸನ್ನು ಬಯಸುತ್ತಿರುವುದು ಸಂತಸ ವಿಷಯವಾಗಿದೆ. ಪ್ರತಿಯೊಬ್ಬ ವ್ಯಕ್ತಿಯೂ ತನ್ನ ಬದುಕಿನಲ್ಲಿ ನೆಮ್ಮದಿ ಕಾಣಬೇಕಾದರೆ ಸಾಯಿಬಾಬಾರವರ ಮೊರೆಹೋಗಬೇಕು ಎಂದರು. ದೂರದ ಬಾಗಲಕೋಟೆ ಜಿಲ್ಲೆಯಿಂದ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾಗಿ ಬಂದ ಸಂದರ್ಭದಲ್ಲಿ ನಾನು ಮೊದಲು ಭೇಟಿ ಮಾಡಿದ್ದೇ ಸಾಯಿಬಾಬಾ ಮಂದಿರಕ್ಕೆ ಕಳೆದ



ಏಪ್ರಿಲ್ ತಿಂಗಳಲ್ಲಿ ಅಭ್ಯರ್ಥಿಯಾಗಿ ಬಂದು, ಜುಲೈ ತಿಂಗಳಲ್ಲಿ ಸಂಸದನಾಗಿ ಭಗವಾನ್ ಸಾಯಿಬಾಬಾರಆಶೀರ್ವಾದಪಡೆಯುತ್ತಿರುವುದು ನನ್ನ ಜೀವನದ ಸಾರ್ಥಕತೆಯ ಭಾಗವೆಂದರು.

ವೆಂಕಟಸಾಯಿ ಸೇವಾಟ್ರಸ್ಟ್‌ನ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿ, ಬಿಜೆಪಿ ಮಂಡಲಾಧ್ಯಕ್ಷ ಸೂರನಹಳ್ಳಿ ಶ್ರೀನಿವಾಸ್, ಬಿಜೆಪಿ ಮುಖಂಡ ಎನ್.ಓಬಳೇಶ್, ಬಾಳೆಮಂಡಿ ರಾಮದಾಸ್, ಟ್ರಸ್ಟ್ ಉಪಾಧ್ಯಕ್ಷ ಕೆ.ಎಂ. ಜಗದೀಶ್, ಕಾರ್ಯದರ್ಶಿ ರವಿಪ್ರಸಾದ್, ನಿರ್ದೇಶಕರಾದ ಬಿ.ವಿ.ಚಿದಾನಂದಮೂರ್ತಿ, ಹೂವಿನಜಗದೀಶ್, ಬಿ.ಸಿ.ವೆಂಕಟೇಶ್‌ಮೂರ್ತಿ, ಹೊನ್ನೂರುಗೋವಿಂದಪ್ಪ, ಬಿ.ಸಿ.ಸತೀಶ್, ಕೆ.ನಾಗೇಶ್ ಮುಂತಾದವರು ಉಪಸ್ಥಿತರಿದ್ದರು.

## ದೈವ ಹಾಗೂ ಗುರುಪರಂಪರೆಯ ಮೇಲೆ ಅಪಾರವಾದ ಗೌರವ



» ಮೊದಲ ಪುಟದಿಂದ

ಅವರ ಧಾರ್ಮಿಕ ಕಾರ್ಯಕ್ರಮಗಳ ಪ್ರತಿಫಲದಿಂದ ಇಂದು ನಾವೆಲ್ಲರೂ ನಮ್ಮ ಸುಂದರ ಬದುಕು ಕಟ್ಟಿಕೊಂಡಿದ್ದೇವೆ. ಸಭಾಭವನ ಎಲ್ಲಾ ಭಕ್ತರ ಶ್ರದ್ಧಾ, ಭಕ್ತಿ ಕೇಂದ್ರವಾಗಲಿ ಎಂದು ಶುಭಹಾರೈಸಿದರು.

ಕಾರ್ಯಕ್ರಮದಲ್ಲಿ ಪಾಲ್ಗೊಂಡ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ ಮಾತನಾಡಿ, ಈ ಬಾರಿಯ ಗುರುಪೂರ್ಣಿಮೆ ಕಾರ್ಯಕ್ರಮ ವಿಶೇಷವಾಗಿದೆ. ದೊಡ್ಡೇರಿಯ ಕನ್ನೇಶ್ವರ ದತ್ತಾವದೂತ ಕ್ಷೇತ್ರ ಇಂದು ಧಾರ್ಮಿಕ ಶ್ರದ್ಧಾಕೇಂದ್ರವಾಗಿ ಹೊರಹೊಮ್ಮುತ್ತಿದೆ. ಮಲ್ಲಪ್ಪಸ್ವಾಮೀಜಿಯವರ ಧಾರ್ಮಿಕ ಚಿಂತನೆ ನಮಗೆ ಸದಾಮಾರ್ಗದರ್ಶನವೆಂದರು. ಶಾಸಕ ಟಿ.ರಘುಮೂರ್ತಿ ಪೂಜಾ ಕಾರ್ಯಕ್ರಮದಲ್ಲಿಪಾಲ್ಗೊಂಡುಮಾತನಾಡಿ,ಮಲ್ಲಪ್ಪಸ್ವಾಮೀಜಿಯವರು ತಮ್ಮದೇಯಾದ ಚಿಂತನೆ ರೂಪಿಸಿಕೊಂಡಿದ್ದಾರೆ, ನಾಡಿನ ಕಲ್ಯಾಣಕ್ಕಾಗಿ ಪ್ರತಿನಿತ್ಯ ಪೂಜಾ ಕಾರ್ಯಕ್ರಮಗಳು ಹಾಗೂ ಹೋಮ ಕಾರ್ಯ ನಡೆಸುತ್ತಾ ಬಂದಿದ್ದಾರೆ. ಮಲ್ಲಪ್ಪಸ್ವಾಮೀಜಿಯೂ ಸಹ ಧಾರ್ಮಿಕ ಚಿಂತಕರು ಅವರ ಮಾರ್ಗದರ್ಶನದಲ್ಲಿ ಎಲ್ಲರೂ ನಡೆಯೋಣವೆಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಜಿ.ಟಿ.ಶಶಿಧರ, ಯುವ ಮುಖಂಡ ಕೆ.ಟಿ.ಕುಮಾರಸ್ವಾಮಿ, ಎನ್.ಓಬಳೇಶ್, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಮಾತೃಶ್ರೀಎನ್. ಮಂಜುನಾಥ, ಹನುಮಂತಪ್ಪ ಮುಂತಾದವರು ಉಪಸ್ಥಿತರಿದ್ದರು.

## ಗ್ಯಾರಂಟಿಗಳ ಅನುಷ್ಠಾನದಿಂದ ಬಡ ಜನರಿಗೆ ನೆಮ್ಮದಿ

» ಚಳ್ಳಕೆರೆ

ರಾಜ್ಯದ ಬಡ ಜನರ ಕಷ್ಟಗಳ ನಿವಾರಣೆಗಾಗಿ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಐದು ಗ್ಯಾರಂಟಿಗಳನ್ನು ಜನತೆಗೆ ನೀಡಿ ಅವುಗಳ ಅನುಷ್ಠಾನದ ಮೂಲಕ ಜನರ ಕಷ್ಟಗಳಿಗೆ ದಾವಿಸಿದ್ದಾರೆ. ಸರ್ಕಾರ ಐದು ಗ್ಯಾರಂಟಿಗಳ ಫಲವಾಗಿ ರಾಜ್ಯದ ಕೋಟ್ಯಾಂತರ ಬಡ ಜನರು ಇಂದು ನೆಮ್ಮದಿಯ ಬದುಕನ್ನು ಕಂಡುಕೊಂಡಿದ್ದಾರೆಂದು ಕ್ಷೇತ್ರದ ಶಾಸಕ, ರಾಜ್ಯಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಭಾನುವಾರ ಶಾಸಕರ ಭವನದಲ್ಲಿ ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿಯ ಸದಸ್ಯರನ್ನು ಸನ್ಮಾನಿಸಿ, ಅಭಿನಂದಿಸಿ ಮಾತನಾಡಿದರು. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ನಿರ್ದೇಶನದ ಮೇರೆಗೆ ಜಿಲ್ಲಾಧಿಕಾರಿಗಳುತಾಲ್ಲೂಕಿನಗ್ಯಾರಂಟಿಅನುಷ್ಠಾನ ಸದಸ್ಯರನ್ನು ನೇಮಿಸಿದ್ದು ಗ್ಯಾರಂಟಿ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಎಲ್ಲಾ ಸದಸ್ಯರು ಶ್ರಮವಹಿಸಿ, ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುವಂತೆ



ಮನವಿ ಮಾಡಿದರು.

ಸಮಿತಿ ಸದಸ್ಯರಾಗಿ ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯರಾದ ಗದ್ದಿಗೆತಿಪ್ಪೇಸ್ವಾಮಿ, ಎಚ್. ಆಂಜನೇಯ, ಕವಿತಾದಳವಾಯಿಮೂರ್ತಿ, ಜನಾರ್ಧನ, ಪುರುಷೋತ್ತಮನಾಯ್ಕ, ಎಸ್. ಮುಜೀಬ್, ಅನಿಲ್‌ಕುಮಾರ್, ಬಿ.ಕೆ.ಗುಜ್ಜಾರಪ್ಪ, ಪಿ.ಸಿ.ನಾಗೇಶ್, ಉಮೇಶ್, ಮಲ್ಲಿಕಾರ್ಜುನ್, ತಿಪ್ಪೇಸ್ವಾಮಿ, ಆರ್.ಬಸಪ್ಪ, ಆರೋಗ್ಯ ರಕ್ಷಾ ಸಮಿತಿ ಸದಸ್ಯರಾದ ನಿವೃತ್ತ ಪ್ರಾಂಶುಪಾಲ ಎಂ.ಕರಿಯಪ್ಪ, ನಿವೃತ್ತ ಕಂದಾಯಾಧಿಕಾರಿ ಮೂಡಲಗಿರಿಯಪ್ಪ, ಉಷಾ, ಶಿವಸ್ವಾಮಿ, ಶ್ರೀನಿವಾಸ್‌ಇವರನ್ನು ಸನ್ಮಾನಿಸಲಾಯಿತು.

ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಟಿ.ಪ್ರಭುದೇವ್, ಬಿ.ವಿ.ಸಿರಿಯಣ್ಣ, ಟಿ.ಗಿರಿಯಪ್ಪ, ಪ್ರಕಾಶ್‌ಮೂರ್ತಿ, ತಿಪ್ಪೇಸ್ವಾಮಿ, ನಗರಸಭಾ ಸದಸ್ಯರಾದ ಎಂ.ಜೆ.ರಾಘವೇಂದ್ರ, ಕೆ.ವೀರಭದ್ರಪ್ಪ, ಪ್ರಕಾಶ್, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ನಗರಸಭೆ ನಾಮನಿರ್ದೇಶನ ಸದಸ್ಯ ಬಡಗಿಪಾಪಣ್ಣ, ಟಿ.ವೀರಭದ್ರ, ನಟರಾಜ್, ಅನ್ವರ್‌ಮಾಸ್ಟರ್, ಮುಖಂಡರಾದ ಕೃಷ್ಣಮೂರ್ತಿ, ಪ್ರಹ್ಲಾದ್, ಸಿ.ಟಿ.ಶ್ರೀನಿವಾಸ್, ವೀರೇಶ್, ಮುಂತಾದವರು ಉಪಸ್ಥಿತರಿದ್ದರು.

## ಮಾಡದಕೆರೆಯಲ್ಲಿ 26 ಮಿ.ಮೀ ಮಳೆ

» ಚಿತ್ರದುರ್ಗ

ಶುಕ್ರವಾರ ಸುರಿದ ಮಳೆಯ ವಿವರದನ್ವಯ ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ತಾಲ್ಲೂಕಿನ ಮಾಡದಕೆರೆಯಲ್ಲಿ 26 ಮಿ.ಮೀ ಮಳೆಯಾಗಿದ್ದು, ಇದು ಜಿಲ್ಲೆಯಲ್ಲಿ ಸುರಿದ ಅತ್ಯಧಿಕ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 16.6ಮಿ.ಮೀ, ಬಾಗೂರು 20.6 ಮಿ.ಮೀ, ಮತ್ತೋಡು 12.2 ಮಿ.ಮೀ, ಶ್ರೀರಾಂಪುರ 16.2 ಮಿ.ಮೀ, ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 11.4 ಮಿ.ಮೀ, ರಾಮಗಿರಿ 9.4 ಮಿ.ಮೀ ಚಿಕ್ಕಜಾಜೂರು 16.2 ಮಿ.ಮೀ, ಬಿ. ದುರ್ಗ 24.2 ಮಿ.ಮೀ, ಹೆಚ್.ಡಿ.ಪುರ 13.4 ಮಿ.ಮೀ, ತಾಳ್ಯ 6 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮೂರು ತಾಲ್ಲೂಕಿನ ಮೊಳಕಾಲ್ಮೂರಿನಲ್ಲಿ 1 ಮಿ.ಮೀ, ರಾಯಪುರ 0.6 ಮಿ.ಮೀ ಹಾಗೂ ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 3.6 ಮಿ.ಮೀ, ಪರಶುರಾಂಪುರ 10.8 ಮಿ.ಮೀ, ನಾಯಕನಹಟ್ಟಿ 3.4ಮಿ.ಮೀ, ತಳಕು 2.2 ಮಿ.ಮೀ, ಡಿ.ಮರಿಕುಂಟೆ 4.6 ಮಿ.ಮೀ ಮಳೆಯಾಗಿದೆ.

---

**ಪ್ರಮುಖ ಸುದ್ದಿ**

#### ಜಿಲ್ಲಾ ರಕ್ಷಣಾಧಿಕಾರಿ ಭೇಟಿ ಪರಿಶೀಲನೆ.

# ಆಂಧ್ರದ ದರೋಡೆಕೋರರು ಮೇಲೆ ಪೊಲೀಸರು ಗುಂಡು

» ಚಳ್ಳಕೆರೆ

ಕಳೆದ ಸುಮಾರು ಒಂದು ತಿಂಗಳಿನಿಂದ ಚಳ್ಳಕೆರೆ ಉಪವಿಭಾಗದಲ್ಲಿ ಕಳ್ಳತನ, ದರೋಡೆ, ಸುಲಿಗೆ ಪ್ರಕರಣಗಳು ನಿರಂತರವಾಗಿ ನಡೆಯುತ್ತಿದ್ದು, ಜುಲೈ 20ರ ರಾತ್ರಿ ನಾಯಕನಹಟ್ಟಿ ಠಾಣಾ ವ್ಯಾಪ್ತಿಯಲ್ಲಿ ಆಂಧ್ರಪ್ರದೇಶದ ಸುಮಾರು ಏಳು ಜನರ ಗುಂಪೊಂದು ಬುಲರೋ ಜೀಪ್‌ನಲ್ಲಿ ದರೋಡೆಗೆ ಆಗಮಿಸಿದ ಸಂದರ್ಭದಲ್ಲಿ ಪೊಲೀಸರ ಸಕಾಲಿಕ ಧಿಟ್ಟಕ್ರಮದಿಂದದರೋಡೆಕೋರರುಕತ್ತಲಲ್ಲಿ ಪರಾರಿಯಾಗಿದ್ದು, ಇದೇ ಸಂದರ್ಭದಲ್ಲಿ ಬೆನ್ನಟ್ಟಿದ ಪೊಲೀಸರು ಮತ್ತು ಅವರ ವಾಹನದ ಮೇಲೆ ಕಲ್ಲು ತೋರಿದಾಗ ನಾಯಕನಹಟ್ಟಿಪಿಎಸ್‌ಐ–2 ಶಿವಕುಮಾರ್ ಇಲಾಖೆ ಪಿಸ್ತೂಲ್‌ನಿಂದ ಆತ್ಮರಕ್ಷಣೆಗಾಗಿ ಐದು ಸುತ್ತು ಗುಂಡುಹಾರಿಸಿದಾಗ ದರೋಡೆಕೋರರು ತಮ್ಮ ವಾಹನ ಸಮೇತ ಓಡಿಹೋಗಿದ್ದಾರೆ.

**ಘಟನೆಯ ವಿವರ :–** ನಾಯಕನಹಟ್ಟಿ ಠಾಣಾ ವ್ಯಾಪ್ತಿಯ ಗಸ್ತು ಸಿಬ್ಬಂದಿ ಶ್ರೀಹರಿ ಮತ್ತು ಸಂತೋಷ್ ನಾಯಕನಹಟ್ಟಿಯ





ತಿಪ್ಪೇರುದ್ರಸ್ವಾಮಿ ಬಡಾವಣೆಯಿಂದ ಆಂಧ್ರಪ್ರದೇಶಕ್ಕೆಸೇರಿದಗೂಡ್ಸ್‌ವಾಹನವನ್ನು ತಡೆದರೂ ನಿಲ್ಲಿಸದೆ ವೇಗವಾಗಿ ಚಲಿಸಿದ ಹಿನ್ನೆಲೆಯಲ್ಲಿ ಅನುಮಾನಗೊಂಡ ಸಿಬ್ಬಂದಿ ಕೂಡಲೇ ಪಿಎಸ್‌ಐ ಶಿವಕುಮಾರ್‌ಗೆ ಮಾಹಿತಿ ನೀಡಿದ್ದಾರೆ. ಶಿವಕುಮಾರ್ ಸಹ ತಡಮಾಡದೆ ತಮ್ಮ ವಾಹನದಲ್ಲಿ ಸಿಬ್ಬಂದಿ ಸಹಿತ ವಾಹನವನ್ನು ಬೆನ್ನತ್ತಿ ಬಂದಾಗ ಕುದಾಪುರ ಗೇಟ್ ಬಳಿ ಕಳ್ಳರ ವಾಹನ ಎದುರಾಗಿದೆ. ನಿಲ್ಲಿಸಲು ಸೂಚಿಸಿದಾಗ ಇವರ ಮೇಲೆ ಕಳ್ಳರು ಕಲ್ಲು ಎಸೆದಿದ್ದು, ಪಿಎಸ್‌ಐ ತಪ್ಪಿಸಿಕೊಂಡು ಕಲ್ಲು ಜೀಪ್‌ನ ಮುಂಭಾಗದ ಗ್ಲಾಸ್‌ಗೆ ಬಿದ್ದು ಜಖಂಗೊಂಡಿದೆ. ಅಪಾಯದ ಮುನ್ಸೂಚನೆಯನ್ನು ಅರಿತ ಜಾಗೃತಗೊಂಡ ಪಿಎಸ್‌ಐ ತಮ್ಮ ಸರ್ವಿಸ್ ಪಿಸ್ತೂಲ್‌ನಿಂದ ಗುಂಡು ಹಾರಿಸಿದ್ದಾರೆ.

ಘಟನೆ ನಡೆದ ಸ್ಥಳಕ್ಕೆ ಭೇಟಿ ನೀಡಿದ ಜಿಲ್ಲಾರಕ್ಷಣಾಧಿಕಾರಿ ಧರ್ಮೇಂದ್ರಕುಮಾರ್ ಮೀನಾ, ಗ್ರಾಮಸ್ಥರಿಂದ ಘಟನೆಯ ಬಗ್ಗೆ ಮಾಹಿತಿ ಪಡೆದರು. ಈ ಸಂದರ್ಭದಲ್ಲಿ ಗ್ರಾಮಸ್ಥರು ರಾತ್ರಿ 1.30ರ ಸಮಯದಲ್ಲಿ ಆಂಧ್ರಪ್ರದೇಶಕ್ಕೆ ಸೇರಿದ ಗೂಡ್ಸ್ ವಾಹನ ಇತ್ತಕಡೆ ಬಂದಿದ್ದು, ಕೆಲವೇ ನಿಮಿಷಗಳಲ್ಲಿ ಪೊಲೀಸ್ ವಾಹನ ಆಗಮಿಸುತ್ತು. ಇದನ್ನು ನೋಡಿದ ನಾವು ಯಾರೋ ಕಳ್ಳರು ಬಂದಿದ್ದಾರೆಂದು ಗಾಬರಿಗೊಂಡೆವು. ಅಷ್ಟರಲ್ಲೇ ಗೂಡ್ಸ್‌ವಾಹನದಲ್ಲಿದ್ದವರು ಪೊಲೀಸರ ಮೇಲೆ ಕಲ್ಲುತೂರಿದರು. ನಂತರ ಪೊಲೀಸರು ಜಾಗೃತಗೊಂಡು ಅವರನ್ನು ಬೆನ್ನತ್ತಿದರು ಎಂದು ತಿಳಿಸಿದ್ದಾರೆ. ದರೋಡೆಕೋರರನ್ನು ಧೈರ್ಯದಿಂದ ಹಿಮ್ಮೆಟ್ಟಿಸಿದ ನಾಯಕನಹಟ್ಟಿ ಪಿಎಸ್‌ಐ ಹಾಗೂ ಸಿಬ್ಬಂದಿ ಕಾರ್ಯವನ್ನು ಪ್ರಶಂಸಿದ್ದಾರೆ. ಕುದಾಪುರ ಗ್ರಾಮದಿಂದ ತಳಕು, ಬೇಡರೆಡ್ಡಿಹಳ್ಳಿ, ಬುಕ್ಕಾಂಬೂದಿ ಮೂಲಕ ಸುಮಾರು 50 ಕಿ.ಮೀ ದೂರ ಬೆನ್ನತ್ತಿದರೂ ಕಳ್ಳರು ಸಿಗದೆ ಪರಾರಿಯಾಗಿದ್ದಾರೆ. ಪೊಲೀಸ್ ಇಲಾಖೆ ಮತ್ತಷ್ಟು ಬಿಗಿಕ್ರಮಗಳನ್ನು ಕೈಗೊಳ್ಳಲಿದೆ.

## ಫಾಸ್ಟ್ ನ್ಯೂಸ್

### ಜುಲೈ 30 ರಂದು ತ್ರೈಮಾಸಿಕ ಕೆಡಿಪಿ ಸಭೆ

» ದಾವಣಗೆರೆ

ಪ್ರಸಕ್ತ ಸಾಲಿನ ಮೊದಲನೇ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯನ್ನು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಅವರ ಅಧ್ಯಕ್ಷತೆಯಲ್ಲಿ ಜುಲೈ 30 ರಂದು ಮಧ್ಯಾಹ್ನ 2.30 ಕ್ಕೆ ಜಿಲ್ಲಾ ಪಂಚಾಯತ್ ಕಚೇರಿಯ ಎಸ್.ಎಸ್.ಮಲ್ಲಿಕಾರ್ಜುನ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಸುರೇಶ್.ಬಿ.ಇಟ್ನಾಳ್ ತಿಳಿಸಿದ್ದಾರೆ.

### ಕೃಷಿ ಪಂಡಿತ್, ಆತ್ಮಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಕೃಷಿಯಲ್ಲಿ ಸಮಗ್ರ ಕೃಷಿ ಪದ್ದತಿ , ಬೆಳೆ ಪದ್ದತಿಗಳು ಮತ್ತು ಬೆಳೆ ವೈವಿಧ್ಯಕರಣ, ಸಾವಯವ ಕೃಷಿ, ಕೃಷಿ ಯಂತ್ರೋಪಕರಣ ಅಭಿವೃದ್ದಿ, ನೀರಿನ ಸಾಮರ್ಥ ಬಳಕೆ, ಇನ್ನಿತರೆ ಯಾವುದಾದರೂ ಕೃಷಿ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಜಿಲ್ಲೆಯ ಆಸಕ್ತ ರೈತರಿಂದ ರಾಜ್ಯ ಮಟ್ಟದ ಕೃಷಿ ಪಂಡಿತ ಪ್ರಶಸ್ತಿಗೆ ರೈತ ಮತ್ತು ರೈತ ಮಹಿಳೆಯರಿಂದ ಪ್ರತ್ಯೇಕವಾಗಿ ಹಾಗೂ ಆತ್ಮ ಯೋಜನೆಯಡಿ ಕೃಷಿಯಲ್ಲಿ ಸಮಗ್ರ ಬೆಳೆ ಪದ್ದತಿ, ಸಮಗ್ರ ನೀರು ನಿರ್ವಹಣೆ, ಸಾವಯವ ಕೃಷಿ, ವೈಜ್ಞಾನಿಕ ಯಂತ್ರೋಪಕರಣಗಳ ಬಳಕೆ, ತೋಟಗಾರಿಕೆ, ಹೈನುಗಾರಿಕೆ, ಕೋಳಿಸಾಕಾಣಿಕೆ, ಮೀನುಗಾರಿಕೆ, ರೇಷ್ಮೆ ಬೇಸಾಯ, ಹೈಟೆಕ್ ಹಸಿರುಮನೆ ಅಳವಡಿಕೆ, ಕೃಷಿ ಸಂಸ್ಕರಣೆ, ಅರಣ್ಯ ಕೃಷಿ, ಆಡು, ಕುರಿ, ಮೊಲ ಇತ್ಯಾದಿ ಸಾಕಾಣಿಕೆ ಚಟುವಟಿಕೆಗಳ ಬಗ್ಗೆ ತಾಲ್ಲೂಕು ಮಟ್ಟ ಹಾಗೂ ಜಿಲ್ಲಾ ಮಟ್ಟದ ಆತ್ಮಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಮತ್ತು ರಾಜ್ಯ ಮಟ್ಟದ ಕೃಷಿ ಪಂಡಿತ ಪ್ರಶಸ್ತಿಗೆ ಆಸಕ್ತ ರೈತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಸಂಬಂಧಪಟ್ಟ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಿಂದ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಆಗಸ್ಟ್ 5 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು, ರೈತ ಸಂಪರ್ಕ ಕೇಂದ್ರದ ಅಧಿಕಾರಿಗಳನ್ನು ಸಂಪರ್ಕಿಸಬೇಕೆಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

### ಶ್ರೀಹಡಪದ ಅಪ್ಪಣ್ಣ ಜಯಂತಿ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರಪಾಲಿಕೆ ಹಾಗೂ ಜಿಲ್ಲಾ ಹಡಪದ ಸಮಾಜ ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಜುಲೈ 23 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಶ್ರೀಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಉದ್ಘಾಟಿಸುವರು. ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಲೋಕಸಭಾ ಸದಸ್ಯರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ರವಿಕುಮಾರ್ ಎನ್, ಚಿದಾನಂದ. ಎಂ.ಗೌಡ, ಕೆ.ಎಸ್ ನವೀನ್, ಡಿ.ಟಿ. ಶ್ರೀನಿವಾಸ್, ಡಾ.ಶ್ರೀಧನಂಜಯ್ ಸರ್ಜಿ, ಎಸ್.ಎಲ್ ಭೋಜೇಗೌಡ, ಡಿ.ಎಸ್ ಅರುಣ್, ಕೆ.ಅಬ್ದುಲ್ ಜಬ್ಬಾರ್, ಮಹಾನಗರ ಪಾಲಿಕೆ ಮೇಯರ್ ವಿನಾಯಕ ಬಿ.ಹೆಚ್, ಉಪಮಹಾಪೌರರಾದ ಯಶೋಧ ಹೆಗ್ಗಪ್ಪ, ಹಡಪದ ಸಮಾಜದ ಅಧ್ಯಕ್ಷರಾದ ಶಶಿಧರ್, ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಸುರೇಶ್ ಬಿ. ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾಪ್ರಶಾಂತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ರವಿಚಂದ್ರ ಉಪಸ್ಥಿತರಿರುವರು. ಶ್ರೀದೇವಯೋಗ ಮಂದಿರ ಝುಂಜರವಾಡ ಶ್ರೀಬಸವರಾಜೇಂದ್ರ ಶರಣರು ವಿಶೇಷ ಉಪನ್ಯಾಸ ನೀಡಲಿದ್ದಾರೆ.

### "ಸಾದ್ವಿ ಸರಸ್ವತಿ" ನಾಟಕ ಪ್ರದರ್ಶನ ಇಂದು

» ಚಿತ್ರದುರ್ಗ

ಕನ್ನಡ ರಂಗಭೂಮಿ ಹಾಗೂ ಸಂಗೀತ ಕ್ಷೇತ್ರಕ್ಕೆ ನಾಲ್ಕು ದಶಕಗಳಿಗೂ ಹೆಚ್ಚು ಸೇವೆ ಸಲ್ಲಿಸಿದ ಶ್ರೀಗುರು ವಾದ್ಯವೃಂದ ದಾವಣಗೆರೆ, ಮತ್ತು ಕನ್ನಡ ಕಲಾವಿದರ ಸಂಘ, ಬೆಳಗಾವಿ ಹಾಗೂ ಶ್ರೀ ಸಂಚಾರಿ ಕೆ.ಬಿ.ಆರ್. ಡ್ರಾಮಾ ಕಂಪನಿ ದಾವಣಗೆರೆ ಇವರ ಸಹಯೋಗದೊಂದಿಗೆ ನಗರದಲ್ಲಿ ಜು.23 ರ ಮಂಗಳವಾರ ಸಂಜೆ 06ಕ್ಕೆ ಚಿತ್ರದುರ್ಗದ ತರಾಸು. ರಂಗಮಂದಿರದಲ್ಲಿ "ಸಾದ್ವಿ ಸರಸ್ವತಿ" ನಾಟಕ ಪ್ರದರ್ಶನ ಏರ್ಪಡಿಸಿದೆ.

# ಭಕ್ತಿಯಿಂದ ಮಾತ್ರ ಗುರುವಿನ ಅನುಗ್ರಹಗಳಿಸಲು ಸಾಧ್ಯ: ಬೆಂಗಳೂರು ಸಂಸದ ಪಿ.ಸಿ.ಮೋಹನ್

» ಚಳ್ಳಕೆರೆ

ಕಳೆದ ನೂರಾರು ವರ್ಷಗಳಿಂದ ಗುರುಪರಂಪರೆಯನ್ನು ಗೌರವಿಸಿ ಆರಾಧಿಸುತ್ತಾ ಬಂದಿರುವ ಏಕೈಕ ದೇಶವೆಂದರೆ ಅದು ಭಾರತ ಮಾತ್ರ. ಬಹುಶಃ ವಿಶ್ವದ ಯಾವುದೇ ಭಾಗದಲ್ಲಿ ಗುರುಪರಂಪರೆಯನ್ನು ಕಾಣಲು ಸಾಧ್ಯವಿಲ್ಲ. ಸಂಸ್ಕೃತಿ ಮತ್ತು ಸಂಸ್ಕಾರದ ಮೂಲಕ ಅಕ್ಷರ ಜ್ಞಾನವನ್ನು ನೀಡಿದ ಗುರುವನ್ನು ಗೌರವಿಸುವ ಪರಂಪರೆ ನಮ್ಮಲ್ಲಿ ಶಾಶ್ವತವಾಗಿದೆ. ಗುರುವಿನ ಸಾಕ್ಷಾತ್ಕಾರದೊಂದಿಗೆ ದೈವವನ್ನು ಆರಾಧಿಸುವ ನಾವೆಲ್ಲರೂ ಧನ್ಯತೆಯ ಭಾವವನ್ನು ಹೊಂದಿದ್ದೇವೆಂದು ಸಂಸದ ಪಿ.ಸಿ.ಮೋಹನ್ ತಿಳಿಸಿದರು.

ಸಾಯಿಬಾಬಾ ಮಂದಿರದಲ್ಲಿ ಶ್ರೀವೆಂಕಟಸಾಯಿ ಸೇವಾಟ್ರಸ್ಟ್, ಸಾಯಿಬಾಬಾ ಸದ್ಭಕ್ತವೃಂದ ಹಮ್ಮಿಕೊಂಡಿದ್ದ ಗುರುಪೂರ್ಣಿಮೆ ಹಾಗೂ ಸಾಯಿಸತ್ಯನಾರಾಯಣಸ್ವಾಮಿ ಪೂಜಾ ಕಾರ್ಯಕ್ರಮವನ್ನು ಜ್ಯೋತಿಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಭಗವಾನ್ ಸಾಯಿಬಾಬಾ ಬರದ ಈ ನಾಡಿನಲ್ಲಿ ಶಾಶ್ವತವಾಗಿ ನೆಲೆಸುವ ಮೂಲಕ ಇಲ್ಲಿನ ಜನತೆಗೆ ನೆಮ್ಮದಿಯ ಬದುಕನ್ನು ನೀಡುವಲ್ಲಿ ಯಶಸ್ವಿಯಾಗಿದ್ದಾನೆ. ಇತ್ತೀಚಿನ ದಿನಗಳಲ್ಲಿ ಚಳ್ಳಕೆರೆ ತಾಲ್ಲೂಕಿನಲ್ಲೂ ಸಹ ಉತ್ತಮ ಮಳೆ, ಬೆಳೆಯಾಗಿದ್ದು, ಇದು ಭಗವಾನ್ ಸಾಯಿಬಾಬಾರವರ ಕೃಪೆಯಿಂದ ಎಂದರು.



ಇತ್ತೀಚಿನ ದಿನಗಳಲ್ಲಿ ರಾಜಕೀಯ ಕ್ಷೇತ್ರದಲ್ಲೂ ಸಹ ಹಲವಾರು ಅನಿರೀಕ್ಷಿತ ಬದಲಾವಣೆಗಳನ್ನು ನಾವು ಕಾಣುತ್ತಿದ್ದೇವೆ. ರಾಜ್ಯದಲ್ಲಿ ಯಾವುದೇ ಅಭಿವೃದ್ದಿ ಕಾಣದಂತಹ ಸ್ಥಿತಿಉಂಟಾಗಿದೆ. ರಾಜ್ಯದ ಬಡವರ ಕಲ್ಯಾಣಕ್ಕಾಗಿ ಪ್ರಧಾನಮಂತ್ರಿ ನರೇಂದ್ರಮೋದಿಯವರು ಅನೇಕ ಕಾರ್ಯಕ್ರಮ ರೂಪಿಸಿದ್ದಾರೆ. ಸ್ವಾರ್ಥರಹಿತ ಸಮಾಜದಿಂದ ಮಾತ್ರ ಒಳಿತನ್ನು ಕಾಣಲು ಸಾಧ್ಯವೆಂದರು. ಪ್ರಾಸ್ತಾವಿಕವಾಗಿ ಮಾತನಾಡಿ, ಎಲ್ಲರನ್ನೂ ಸ್ವಾಗತಿಸಿದ ಟ್ರಸ್ಟ್ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿ, ಪ್ರಸ್ತುತ 11ನೇ ವರ್ಷದ ಗುರುಪೂರ್ಣಿಮೆ ಉತ್ಸವವನ್ನು ಆಚರಿಸಿತ್ತಿದ್ದೇವೆ. ಚಳ್ಳಕೆರೆ ನಗರದಲ್ಲಿ ಭಗವಾನ್ ಶ್ರೀಸಾಯಿಬಾಬಾ ಮಂದಿರದ ನಿರ್ಮಿಸುವ ಬಗ್ಗೆ ಚರ್ಚೆ ನಡೆದಾಗ ಎಲ್ಲರಿಂದಲೂ ಉತ್ತಮ ಸಹಕಾರ ದೊರೆಯಿತು. 2012ರಲ್ಲಿ ಆರಂಭವಾದ ಕಟ್ಟಡ ನಿರ್ಮಾಣ ಕಾರ್ಯ ಕೇವಲ 6 ತಿಂಗಳ ಅವಧಿಯಲ್ಲಿ ಸುಮಾರು 12 ಕೋಟಿ ವೆಚ್ಚದಲ್ಲಿ ಪೂರ್ಣಗೊಂಡಿತು ಎಂದು ಹೇಳಿದರು.

ವೆಂಕಟಸಾಯಿ ಸೇವಾಟ್ರಸ್ಟ್ ಕಾರ್ಯಕ್ಕೆ ಜನತೆ ಆರ್ಥಿಕ ನೆರವಿನೊಂದಿಗೆ ತುಂಬು ಸಹಕಾರವನ್ನು ನೀಡಿ ಭಕ್ತಿಶ್ರದ್ದೆಯ ಸಾಯಿಬಾಬಾ ಮಂದಿರ ನಿರ್ಮಾಣಕ್ಕೆ ನೆರವಾಗಿದ್ಧಾರೆ. ಮುಂದಿನ ದಿನಗಳಲ್ಲೂ ಸಹ ಸಾಯಿಭಕ್ತರಿಗೆ ಮಂದಿರದಲ್ಲಿ ಪೂಜಾ ಕಾರ್ಯಕ್ರಮಗಳು ಎಂದಿನಂತೆ ನಡೆಯಲಿವೆ. ಭಕ್ತರ ಸಹಕಾರದಿಂದ ಮಾತ್ರ ಧಾರ್ಮಿಕ ಕಾರ್ಯಕ್ರಮಗಳು ನಡೆಸಲು ಸಾಧ್ಯ ಎಂದರು.

ಶ್ರೀಕ್ಷೇತ್ರ ಬೆಲಗೂರು ವೀರಪ್ರತಾಪ ಆಂಜನೇಯಸ್ವಾಮಿ ಸನ್ನಿಧಿಯ ವಿಜಯಮಾರುತಿಶರ್ಮಸ್ವಾಮೀಜಿ ಮಾತನಾಡಿ, ಶ್ರೀಮಠದ ಪೂರ್ವಾಶ್ರಮದ ಗುರುಗಳಾದ ಬಿಂದುಮಾಧವಶರ್ಮರವರು ಇಲ್ಲಿನ ದೇವಸ್ಥಾನದೊಂದಿಗೆ ನಿಕಟ ಸಂಪರ್ಕ ಹೊಂದಿದ್ದರು. ಮಂದಿರ ನಿರ್ಮಾಣಕ್ಕೆ ಭೂಮಿಪೂಜೆಯನ್ನು ನೆರವೇರಿಸಿದ್ದರು. ಟ್ರಸ್ಟ್ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿ ಮತ್ತು ತಂಡ ಭಕ್ತರ ಶ್ರದ್ದಾಭಕ್ತಿಗೆ ಗೌರವ ನೀಡಿ ಭವ್ಯವಾದ ಮಂದಿರ ನಿರ್ಮಿಸಿದ್ದು ಇದು ಭಕ್ತರ ಬೇಡಿಕೆಗಳನ್ನು ಈಡೇರಿಸುವ ಶಕ್ತಿಕೇಂದ್ರವಾಗಲಿ ಎಂದು ಶುಭಹಾರೈಸಿದರು.

ದಿವ್ಯಸಾನಿತ್ಯ ವಹಿಸಿದ್ದ ಸಿದ್ದಯ್ಯನಕೋಟೆ ವಿಜಯಮಹಂತೇಶ್ವರಸಂಸ್ಥಾನ ಶಾಖಾಮಠದ ಬಸವಲಿಂಗ ಮಹಾಸ್ವಾಮಿಗಳು ಮಾತನಾಡಿ, ದೇವಸ್ಥಾನ ಮಂದಿರಗಳಿಗೆ ಹೆಚ್ಚು ಜನ ಆಗಮಿಸುವ ಉದ್ದೇಶ ದೇವರಲ್ಲಿ ತಮ್ಮ ಸಮಸ್ಯೆಗಳನ್ನು ನಿವೇದಿಸಿ, ಪರಿಹಾರ ಪಡೆಯುವುದಾಗಿದೆ. ದೇವರ ಮೇಲಿರುವ ಅಪಾರವಾದ ಭಕ್ತಿಶ್ರದ್ದೆಗೆ ಎಂದೂ ಕೊರತೆ ಉಂಟಾಗಿಲ್ಲ. ನಮ್ಮಲ್ಲಿ ದೇವರು, ದೈವದ ಬಗ್ಗೆ ಅಪಾರವಾದ ನಂಬಿಕೆ, ವಿಶ್ವಾಸವಿದೆ. ನಾವು ಸಮಾಜಕ್ಕೆ ಏನಾದರೂ ಒಳಿತು ಮಾಡಲು ಅದಕ್ಕೆ ದೈವಬಲಬೇಕು. ನಮಗೆ ಸುಲಭವಾಗಿ ಗುರುಗಳ ಅನುಗ್ರಹವಾಗಲು ಭಕ್ತಿ,ಶ್ರದ್ದೆಯ ಮೂಲಕ ಗುರುವನ್ನು ಪ್ರಾರ್ಥಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ತಾಲ್ಲೂಕಿನ ಬಲಿಜ ಸಮಾಜದ ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಹೆಚ್ಚು ಅಂಕಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ವೆಂಕಟಸೇವಾಟ್ರಸ್ಟ್ ಉಪಾಧ್ಯಕ್ಷ ಬಿ.ಸಿ.ವೆಂಕಟೇಶ್ ಮೂರ್ತಿ, ಪ್ರಧಾನ ಕಾರ್ಯದರ್ಶಿ ಎಂ.ಆರ್.ರವಿಕುಮಾರ್, ಕಾರ್ಯದರ್ಶಿ ಬಿ.ಸಿ.ಸತೀಶ್, ಹೂವಿನ ಜಗದೀಶ್, ಕೆ.ನಾಗೇಶ್, ಬಿ.ವಿ. ಚಿದಾನಂದಮೂರ್ತಿ, ಕೆ.ಎಂ.ಜಗದೀಶ್, ಬಿ.ಕೆ.ನಾಗರಾಜು, ಜಿ.ವೆಂಕಟೇಶ್, ಅರುಣಾ ಜಗದೀಶ್, ಬಲಿಜಸಮಾಜದ ಮುಖಂಡರಾದಮಂಜುನಾಥ,ಶ್ರೀನಿವಾಸ್, ತಿಮ್ಮಶೆಟ್ಟಿ, ಸೂರ್ಯನಾರಾಯಣ, ಪುಪ್ಪಸಂಜೀವಮೂರ್ತಿ ಉಪಸ್ಥಿತರಿದ್ದರು.

# ವೀರಶೈವ ಸೊಸೈಟಿಗೆ 83ಲಕ್ಷ ನಿವ್ವಳ ಲಾಭ

» ಚಿತ್ರದುರ್ಗ

ಚಿತ್ರದುರ್ಗ ನಗರದ ವೀರಶೈವ ಅರ್ಬನ್ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ,ಲಿ.ನಲ್ಲಿ 2023–24ನೇ ಸಾಲಿಗೆ 83,03,755.80 ರೂ. ಗಳ ನಿವ್ವಳ ಲಾಭವನ್ನು ಪಡೆದಿದ್ದು ಅದನ್ನು ಸೊಸೈಟಿ ಮತ್ತು ಸಿಬ್ಬಂದಿಯ ಕಲ್ಯಾಣದ ವಿವಿಧ ಕಾರ್ಯಕ್ರಮಗಳಿಗೆ ಹಾಗೂ ಷೇರುದಾರರಿಗೆ ಹಂಚಿಕೆಯನ್ನು ಮಾಡಲಾಗುವುದು ಎಂದು ಸೊಸೈಟಿಯ ಅಧ್ಯಕ್ಷರಾದ ಶಿವಕುಮಾರ್ ಪಟೇಲ್ ತಿಳಿಸಿದರು.

ಚಿತ್ರದುರ್ಗ ನಗರದ ಪಂಚಚಾರ್ಯ ಕಲ್ಯಾಣ ಮಂಟಪದಲ್ಲಿ ಭಾನುವಾರ ಹಮ್ಮಿಕೊಂಡಿದ್ದ 23ನೇ ವರ್ಷದ ಸರ್ವ ಸದಸ್ಯರ ವಾರ್ಷಿಕ ಮಹಾ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸೊಸೈಟಿಯು 1734 ಸದಸ್ಯರನ್ನು ಹೊಂದಿದ್ದು, 79,46,900.00ರೂ. ಗಳನ್ನು ಷೇರು ಬಂಡವಾಳವಾಗಿ ಪಡೆದಿದೆ. ಇದ್ದಲ್ಲದೆ 13,50,58,801.00 ರೂ.ಗಳನ್ನು ಠೇವಣಿಯಾಗಿ, 5,68,41,890.00ವಿವಿಧ ಕಡೆಗಳಲ್ಲಿ ಹೊಡಿಕೆಯನ್ನು ಮಾಡಲಾಗಿದ್ದು, 20,51,05,233.00 ರೂ.ಗಳನ್ನು ದುಡಿಯುವ ಬಂಡವಾಳವಾಗಿ ಮಾಡಲಾಗಿದೆ. ಇದರೊಂದಿಗೆ 12,36,97,942.00 ರೂ.ಗಳನ್ನು ಸಾಲ ಮತ್ತು ಮುಂಗಡವಾಗಿ ನೀಡಲಾಗಿದೆ ಎಂದ ಅವರು. ಕಳೆದ ಸಾಲಿನಲ್ಲಿಯೇ ಮುಂದಿನ ಸಾಲಿನಲ್ಲಿ ಲಾಭವನ್ನು ಹೆಚ್ಚಳ ಮಾಡುವುದಾಗಿ ತಿಳಿಸಿತ್ತು ಅದರಂತೆ ಈ ಸಾಲಿನಲ್ಲಿ ಲಾಭವನ್ನು ಹೆಚ್ಚಳ ಮಾಡಲಾಗಿದೆ ಎಂದರು.

ನಮ್ಮ ಸೊಸೈಟಿಯಲ್ಲಿ ಗ್ರಾಹಕರು ನಂಬಿಕೆಯನ್ನು ಇಟ್ಟು ಈ ಸಾಲಿನಲ್ಲಿ 59 ಲಕ್ಷ ರೂ.ಗಳನ್ನು ಠೇವಣಿಯಾಗಿ ಇರಿಸಿದ್ದಾರೆ. ಈ ಸಮಯದಲ್ಲಿ ಸಮಾಜದವರು 60 ಲಕ್ಷ ರೂ. ಗಳನ್ನು ತೆಗೆದರು ಸಹಾ ಹೆಚ್ಚಿನ ಪ್ರಮಾಣದಲ್ಲಿ ಠೇವಣಿಯನ್ನು ಪಡೆಯಲಾಗಿದೆ. ಇದ್ದಲ್ಲದೆ



ಸೊಸೈಟಿಯಲ್ಲಿ ಭದ್ರತಾ ಕಪಾಟು, ಚಿನ್ನಾಭರಣದ ಮೇಲೆ ಸಾಲ, ಉಳಿತಾಯ ಖಾತೆ, ಠೇವಣಿ, ಸಾಲ ವಸೂಲಾತಿಯಲ್ಲಿಯೂ ಸಹಾ ಮುಂದಿದೆ. 2015–16ರಿಂದಲೂ ಸಹಾ ಸೊಸೈಟಿಯು ಆಡಿಟ್‌ನಲ್ಲಿ ಎ. ವರ್ಗವನ್ನು ಪಡೆದಿದ್ದು, ತನ್ನ ಷೇರುದಾರರಿಗೆ ಅಂದಿನಿಂದಲೂ ಸಹಾ ಶೇ.20 ರಷ್ಟು ಡಿವಿಡೆಂಡ್‌ನ್ನು ನೀಡಲಾಗುತ್ತಿದೆ. ನಗರದ ಬಿವಿಕೆ ಬಡಾವಣೆಯಲ್ಲಿ ಸೊಸೈಟಿಯ ನಿವೇಶನ ಇದೆಅದರಲ್ಲಿಏನನ್ನುನಿರ್ಮಾಣಮಾಡಬೇಕೆಂದು ಸರ್ವ ಸದಸ್ಯರ ಸಭೆಯಲ್ಲಿ ಅಧ್ಯಕ್ಷರಾದ ಶಿವಕುಮಾರ್ ಸದಸ್ಯರು ಅಭಿಪ್ರಾಯವನ್ನು ಕೇಳಿದಾಗ ಹಲವಾರು ಸದಸ್ಯರು ವಿವಿಧ ರೀತಿಯ ಅಭಿಪ್ರಾಯಗಳನ್ನು ಮಂಡಿಸಿದರು. ಇದರಲ್ಲಿ ಸಮುದಾಯಭವನ, ಗೋದಾಮು, ಕಾಂಪ್ಲೆಕ್ಸ್, ಕಲ್ಯಾಣ ಮಂಟಪವನ್ನು ನಿರ್ಮಾಣ ಮಾಡುವಂತೆ ತಿಳಿಸಿದಾಗ ಅಂತಿಮವಾಗಿ ನಿರ್ಮಾಣವನ್ನು ಸೊಸೈಟಿಯ ಆಡಳಿತ ಮಂಡಳಿಯ ತೀರ್ಮಾನಕ್ಕೆ ಬಿಡಲಾಯಿತು.

ಸೊಸೈಟಿಯು ಮುಂದಿನ ದಿನದಲ್ಲಿ 25 ವರ್ಷ ತುಂಬಲಿದೆ, ಇದರ ಕಾರ್ಯಕ್ರಮಕ್ಕೆ ಈಗಿನಿಂದಲೇ ಹಣವನ್ನು ತೆಗೆದಿರಿಸಲಾಗಿದೆ, ಈ ಸಾಲಿನಲ್ಲಿಯೂ ಸಹಾ ಹಣವನ್ನು ತೆಗೆಯಲಾಗಿದೆ. ಸರ್ವ ಸದಸ್ಯರ ಸಭೆಯೂ 2023–24ನೇ ಸಾಲಿನ ಆಯವ್ಯಯಕ್ಕಿಂತ ಹೆಚ್ಚಿಗೆ ಆಗಿದ್ದಕ್ಕೆ ಹಾಗೂ 2024–25ನೇ ಸಾಲಿನ ಆಯ–ವ್ಯಯಕ್ಕೆ ಸರ್ವ ಸದಸ್ಯರ ಸಭೆ ಅನುಮೋದನೆಯನ್ನು ನೀಡಲಾಯಿತು.ಇದೇ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿಯುನಲ್ಲಿ ಶೇ.80ಕ್ಕಿಂತ ಹೆಚ್ಚಿಗೆ ಅಂಕವನ್ನು ಪಡೆದ ಸೊಸೈಟಿಯ ಷೇರುದಾರರ ಮಕ್ಕಳನ್ನು ಸನ್ಮಾನಿಸಲಾಯಿತು. ಕಳೆದ ಒಂದು ವರ್ಷದಲ್ಲಿ ನಿಧನರಾದ ಸೊಸೈಟಿಯ ಷೇರುದಾರರಿಗೆ ಒಂದು ನಿಮಿಷ ಮೌನವನ್ನು ಆಚರಿಸ ಸಂತಾಪ ಸೂಚಿಸಲಾಯಿತು.

ಸೊಸೈಟಿಯ ನಿರ್ದೇಶಕರಾದ ಆರ್, ಶೈಲಜಾ ಪ್ರಾರ್ಥಿಸಿದರೆ, ಉಪಾಧ್ಯಕ್ಷರಾದ ಜಿ.ಟಿ.ಸುರೇಶ್ ಸ್ವಾಗತಿಸಿದರು, ವ್ಯವಸ್ಥಾಪಕರಾದ ಶ್ರೀಮತಿ ಕುಸುಮ ಜವಳಿ ಕಾರ್ಯಕ್ರಮ ನಿರೂಪಿಸಿದರು.

# ಕಾಲುವೇಹಳ್ಳಿ: ಹಿಂದೂ, ಮುಸ್ಲಿಂ ಬಂಧುಗಳ ಸಮಾಗಮದಲ್ಲಿ ಪೀರಲ ದೇವರ ಹಬ್ಬ ಯಶಸ್ವಿ



» ಚಳ್ಳಕೆರೆ

ತಾಲ್ಲೂಕಿನ ಕಾಲುವೇಹಳ್ಳಿ ಗ್ರಾಮದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಸಹ ಹಿಂದೂ, ಮುಸ್ಲಿಂ ಬಂಧುಗಳ ಸಹಯೋಗದೊಂದಿಗೆ ಪೀರಲ ಹಬ್ಬವನ್ನು ಭಕ್ತಿ, ಶ್ರದ್ದೆ, ಸಡಗರಗಳಿಂದ ಆಚರಿಸಲಾಯಿತು. ಗ್ರಾಮದಲ್ಲಿರುವ ಪೀರಲ ದೇವರ ದೇವಸ್ಥಾನದ ಆವರಣದಲ್ಲಿ ಹಬ್ಬದ ವಾತಾವರಣವಿದ್ದು, ಇಡೀ ಗ್ರಾಮದ ಜನರು ಪೀರಲ ದೇವರ ಸನ್ನಿಧಿಗೆ ಆಗಮಿಸಿ ಭಕ್ತಿಶ್ರದ್ದೆಯಿಂದ ಪೂಜೆ ಸಲ್ಲಿಸಿ ಪ್ರಸಾದವನ್ನು ಸ್ವೀಕರಿಸಿದರು. ಅದೇ ಸಂದರ್ಭದಲ್ಲಿ ಹರಿಕೆ ಹೊತ್ತ ಅನೇಕ ಕುಟುಂಬದ ಸದಸ್ಯರು ದೇವರ ಸನ್ನಿಧಿಗೆ ಆಗಮಿಸಿ ಹರಿಕೆ ಪೂರೈಸಿದರು. ಬೆಲ್ಲದ ಸಹಿತ ಮಕ್ಕಳ ತುಲಬಾರ ಸಹ ನಡೆಯಿತು. ಅಂತಿಮವಾಗಿ ಪೂಜೆಯ ನಂತರ ಆಗಮಿಸಿದ ಎಲ್ಲಾ ಭಕ್ತರಿಗೆ ಬೆಲ್ಲ, ಮಂಡಕ್ಕಿ, ಸಕ್ಕರೆ, ಮುಂತಾದ ಪದಾರ್ಥಗಳಿಂದ ಸಿದ್ದಪಡಿಸಿದ್ದ ಪ್ರಸಾದವನ್ನು ನೀಡಲಾಯಿತು. ಗ್ರಾಮದ ಮುಖಂಡರಾದ ಕೆ.ಒ.ಪಾಲಣ್ಣ, ಕೆ.ಪಿ.ಭೂತಯ್ಯ, ಜೆ.ಪಿ.ಜಯಪಾಲಯ್ಯ, ಲಿಂಗದಹಳ್ಳಿಪಾಲಣ್ಣ, ಜಾಜೂರು ಹನುಮಂತಪ್ಪ, ಕಾಲುವೇಹಳ್ಳಿಶ್ರೀನಿವಾಸ್, ರಂಗಸ್ವಾಮಿ, ರಾಘವೇಂದ್ರ, ಕರೀಂಸಾಬ್, ಶಾರುಖ್, ಪೀರ್‌ಸಾಬ್, ಶರೀಫ್, ಜಾಫರ್ ಮುಂತಾದವರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ದೇಶದ ಸದೃಢತೆಗೆ ಯುವ ಶಕ್ತಿ ಸನ್ನದ್ದವಾಗಬೇಕು; ಎಸ್ಪಿ

» ದಾವಣಗೆರೆ

ದೇಶದ ಸದೃಢತೆಗೆ ಯುವ ಶಕ್ತಿಗಳು ಸನ್ನದ್ದರಾಗಿ ಸಮಾಜ ಘಾತಕ ಶಕ್ತಿಗಳ ಮಾಹಿತಿಯನ್ನು ಇಲಾಖೆಯೊಂದಿಗೆ ಹಂಚಿಕೊಳ್ಳಬೇಕೆಂದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ತಿಳಿಸಿದರು.

ಅವರು ಶನಿವಾರ ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಯುವ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ರಾಷ್ಟ್ರ ನಿರ್ಮಾಣದಲ್ಲಿ ಯುವಕರ ಪಾತ್ರ ಮಹತ್ತರವಾಗಿದೆ, ದೇಶವನ್ನು ಅಭಿವೃದ್ಧಿಪಡಿಸಲು ಮತ್ತು ಪ್ರಗತಿಯತ್ತ ಸಾಗಲು ಸಹಾಯ ಮಾಡುವ ಶಕ್ತಿ ಹೊಂದಿದ್ದಾರೆ. ದೇಶದೊಳಗೆ ಸಾಮಾಜಿಕ ಸುಧಾರಣೆ ತರುವ ಜವಾಬ್ದಾರಿಯೂ ಸಹ ಯುವಕರ ಮೇಲಿದೆ ಎಂದು ತಿಳಿಸಿದರು.

ಯುವ ಜನರು ಇಂದಿನ ದಿನಗಳಲ್ಲಿ ಮೊಬೈಲ್ ಬಳಕೆಗೆ ಹೆಚ್ಚಿನ ಸಮಯ ವ್ಯಯಮಾಡುವ ಮೂಲಕ ತಮ್ಮ ಉತ್ತಮ ಭವಿಷ್ಯಕ್ಕೆ ಮೀಸಲಾದ ಸಮಯವನ್ನಯ



ವ್ಯರ್ಥ ಮಾಡಿಕೊಳ್ಳುತ್ತಿದ್ದಾರೆ. ಯುವ ಪೀಳಿಗೆಯನ್ನು ಆವರಿಸಿರುವ ಮಾದಕ ವಸ್ತುಗಳು ದೈಹಿಕವಾಗಿ ಮಾತ್ರವಲ್ಲ, ಅವರ ಮಾನಸಿಕ ಆರೋಗ್ಯವನ್ನು ಹದಗೆಡಿಸುವುದಲ್ಲದೆ ತಮ್ಮ ಕುಟುಂಬದ ಆರ್ಥಿಕತೆ ಹಾಗೂ ಸಮಾಜದ ಆರ್ಥಿಕತೆ ಮೇಲೆ ನಷ್ಟ ತರುತ್ತದೆ ಎಂದು ತಿಳಿಸಿದರು. ಪ್ರಗತಿ ಮತ್ತು ನಾವೀನ್ಯತೆಯನ್ನು ತರಲು ಸಾಕಷ್ಟು ಸಾಮರ್ಥ್ಯವನ್ನು ಹೊಂದಿರುವ ದೇಶದ ಯುವಕರಲ್ಲಿ ಆಡಳಿತವನ್ನು ಬದಲಾಯಿಸುವ ಕ್ರಿಯಾತ್ಮಕ ಶಕ್ತಿಯು ಇದೆ. ದೇಶದ ಉಜ್ವಲತೆ ಮತ್ತು ಉತ್ತುಂಗಕ್ಕೆ ಕೊಂಡೊಯ್ಯಲು ಅವರ ಶಕ್ತಿ, ಆಲೋಚನೆಗಳು ಮತ್ತು ನಾವೀನ್ಯತೆ ಇಂದಿನ ಅಗತ್ಯವಾಗಿದೆ. ಸಾಮಾಜಿಕ ಜಾಲತಾಣಗಳಲ್ಲಿ ಯುವಕರು, ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಚೋದನೆ ನೀಡುವ ಪೋಸ್ಟ್ ಹಾಕುವುದಾಗಲಿ ಅಥವಾ ಫೇಕ್ ನ್ಯೂಸ್ ಮಾಡುವುದಾಗಲಿ ಅಥವಾ ಇನ್ಯಾವುದೇ ಅಚಾತುರ್ಯ ಘಟನೆಗಳಲ್ಲಿ ಭಾಗಿಯಾದಲ್ಲಿ ಕಾನೂನು ರೀತಿ ಕ್ರಮ ಜರುಗಿಸಲಾಗುವುದು ಎಂದು ತಿಳಿಸದರು.

ಅಧಿಕಾರಿಗಳು ಸರಿಯಾಗಿ ಕಾರ್ಯನಿರ್ವಹಿಸಿದೆ ಇದ್ದಲ್ಲಿ ಪೊಲೀಸ್ ಠಾಣೆ ಮುಂದೆ ಕ್ಯೂಆರ್ ಕೋಡ್ ಅಳವಡಿಸಲಾಗಿದೆ. ಅದನ್ನು ಸ್ಕ್ಯಾನ್ ಮಾಡಿ ಅವರ ಬಗ್ಗೆ ಮಾಹಿತಿ ನೀಡಿದರೆ ಕಾನೂನು ರೀತಿ ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದರು. ಯುವಕರು ತಮ್ಮ ಜಿಲ್ಲೆ, ತಾಲ್ಲೂಕು ಮತ್ತು ಗ್ರಾಮಗಳಲ್ಲಿ ಕಾನೂನು ಉಲ್ಲಂಘನೆ, ಕಾನೂನು ಬಾಹಿರ ಚಟುವಟಿಕೆ ನೆಡೆದಿದ್ದಲ್ಲಿ ಪೊಲೀಸ್ ಇಲಾಖೆ ಮೇಲೆ ಗೌರವ, ನಂಬಿಕೆಯಿಟ್ಟು ಧೈರ್ಯವಾಗಿ ಮಾಹಿತಿ ನೀಡಿ ಎಂದು ತಿಳಿಸಿದರು.

ಹೆಚ್ಚುವರಿ ರಕ್ಷಣಾಧಿಕಾರಿ ವಿಜಯ್‌ಕುಮಾರ್ ಎಂ.ಸಂತೋಷ್ ಮಾತನಾಡಿ ಸಮಾಜದಲ್ಲಿ ಕೆಡುಕು ಬಯಸುವವರ ಬಗ್ಗೆ ಇಲಾಖೆಗೆ ಮಾಹಿತಿ ನೀಡಲು ಪ್ರತಿಯೊಂದು ಗ್ರಾಮ, ಜಿಲ್ಲೆಯ ಪೊಲೀಸ್ ಠಾಣೆಯಲ್ಲಿ ಯುವ ಸಮಿತಿ ರಚನೆ ಮಾಡಲಾಗಿದೆ. ತಮ್ಮ ಸುತ್ತಮುತ್ತ ನಡೆಯುವಂತ ಸಮಾಜಘಾತಕ ಕೃತ್ಯ, ಮಾದಕ ವಸ್ತುಗಳ ಮಾರಾಟ, ಜೂಜಾಟ, ಅಹಿತಕರ ಘಟನೆಗಳ ಬಗ್ಗೆ ನಿಖರವಾದ ಮಾಹಿತಿ ನೀಡಿದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಮಂಜುನಾಥ್ ಜಿ , ಡಿ.ವೈ.ಎಸ್.ಪಿ ಮಲ್ಲೇಶ್ ಹಾಗೂ ಇತರ ಅಧಿಕಾರಿಗಳು, ಯುವಕರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T